ಸಂಪುಟ 01 | ಸಂಚಿಕೆ 126 | ಮಂಗಳವಾರ 24 ಮಾರ್ಚ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ವಿಶ್ವ ಕ್ಷಯ (ಟಿಬಿ) ದಿನ

1882 ರಲ್ಲಿ ಡಾ. ರಾಬರ್ಟ್ ಕೋಚ್ ಅವರು ಕ್ಷಯರೋಗಕ್ಕೆ ಕಾರಣವಾಗುವ ಬ್ಯಾಸಿಲಸ್ ಮೈಕೋಬ್ಯಾಕ್ಟೀರಿಯಂ ಟ್ಯೂಬರ್ಕ್ಯುಲೋಸಿಸ್ ಅನ್ನು ಕಂಡುಹಿಡಿದ ದಿನಾಂಕವನ್ನು ಸ್ಮರಿಸಲು ಪ್ರತಿ ವರ್ಷ ಮಾರ್ಚ್ 24 ರಂದು ವಿಶ್ವ ಕ್ಷಯರೋಗ ದಿನವನ್ನು ಆಚರಿಸಲಾಗುತ್ತದೆ. ಜನರಿಗೆ ಕ್ಷಯರೋಗದ ಬಗ್ಗೆ, ಪ್ರಪಂಚದಾದ್ಯಂತ ಅದರ ಪ್ರಭಾವದ ಬಗ್ಗೆ ಅರಿವು ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ.

## ಸುಭಾಷಿತ

ವಿಕಾಸವೇ ಜೀವನ, ಸಂಕೋಚವೇ ಮರಣ. ಎಲ್ಲ ಬಗೆಯ ಪ್ರೀತಿಯೂ ವಿಕಾಸ, ಸ್ವಾರ್ಥವೇ ಸಂಕೋಚ.

–ಸ್ವಾಮಿ ವಿವೇಕಾನಂದ

## ಜೆಸ್ಕಾಂನಿಂದ ಇಂದು ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ ಶಾಖೆ 2ರಲ್ಲಿ ಡಿ-ಮಾರ್ಟ್ ವಿದ್ಯುತ್ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಮಾರ್ಚ್ 24ರ ಬೆಳಿಗ್ಗೆ 10:30 ರಿಂದ ಮಧ್ಯಾಹ್ನ 02:30 ಗಂಟೆವರೆಗೆ ರಾಯಚೂ-ರಿನ ಅಸ್ಕಿಹಾಳ, ಕೋಲ್ಡ್ ಸ್ಟೋರೇಜ್ ಎದುರುಗಡೆ, ಕೃಷ್ಣ ಮೇಡೌಸ್, ಬೈಪಾಸ್ ರೋಡ್, ಅಮರಾವತಿ ಲೇಔಟ್ ಹಾಗೂ ಸುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗುತ್ತಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386, 08532-231999, 9480845955 ಅಥ-’ವಾ 9448395624ಗೆ ಸಂಪರ್ಕಿಸಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಭಾರತದ ಕಾರ್ಯತಂತ್ರದ ತೈಲ ಸಂಗ್ರಹಣೆ ಮುಕ್ಕಾಲು ಭಾಗ ಮಾತ್ರ ಭರ್ತಿ :ಸಚಿವ

ನವದೆಹಲಿ: ತುರ್ತು ಪರಿಸ್ಥಿತಿಗಳು ಅಥವಾ ಬೆಲೆ ಏರಿಳಿತಗಳ ಸಂದರ್ಭಗಳಲ್ಲಿ ಸುಮಾರು 9.5 ದಿನಗಳ ಅವಧಿಗೆ ತೈಲ ಪೂರೈಕೆಯನ್ನು ನಿರ್ವಹಿಸಲು ರೂಪಿಸಲಾದ ಭಾರತದ ತಂತ್ರಜ್ಞಾನದ ತೈಲ ಸಂಗ್ರಹಣೆ ಈಗ ಕೇವಲ ಎರಡು-ಮೂರರಷ್ಟು ಮಾತ್ರ ಭರ್ತಿಯಾಗಿದೆ ಎಂದು ರಾಜ್ಯಸಭೆಗೆ ತಿಳಿಸಲಾಗಿದೆ.

ಭಾರತವು ವಿಶ್ವದ ಮೂರನೇ ಅತಿ ದೊಡ್ಡ ಇಂಧನ ಬಳಕೆದಾರ ದೇಶವಾಗಿದ್ದು, ತನ್ನ ಕಚ್ಚಾ ತೈಲ ಅಗತ್ಯಗಳ ಸುಮಾರು ಶೇ.88 ರಷ್ಟು ಆಮದುಗಳ ಮೇಲೆ ಅವಲಂಬಿತವಾಗಿದೆ. ಇದನ್ನು ಗಮನದಲ್ಲಿಟ್ಟುಕೊಂಡು, ಆಂಧ್ರಪ್ರದೇಶದ ವಿಶಾಖಪಟ್ಟಣಂ ಮತ್ತು ಕರ್ನಾಟಕದ ಮಂಗಳೂರು ಹಾಗೂ ಪಾದೂರು ಪ್ರದೇಶಗಳಲ್ಲಿ ಒಟ್ಟು 5.33 ಮಿಲಿಯನ್ ಟನ್ ಸಾಮರ್ಥ್ಯದ ಭೂಗತ ಸಂಗ್ರಹಣಾ ಸೌಲಭ್ಯಗಳನ್ನು ನಿರ್ಮಿಸಲಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆಯ ರಾಜ್ಯ ಸಚಿವ ಸುರೇಶ್ ಗೋಪಿ ಅವರು ರಾಜ್ಯಸಭೆಯಲ್ಲಿ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.



ಸ್ಥಳೀಯ ಪ್ರವಾಸ ಮಾರ್ಗದರ್ಶಿಗಳು ಮಾರುಕಟ್ಟೆ ಪರಿಸ್ಥಿತಿಗಳ ಪ್ರಕಾರ ಸಂಗ್ರಹಿತ ತೈಲದ ಪ್ರಮಾಣ ಬದಲಾಗುತ್ತದೆ. ಪ್ರಸ್ತುತ ಇಂಡಿಯನ್ ಸ್ಟ್ರಾಟೆಜಿಕ್ ಪೆಟ್ರೋಲಿಯಂ ರಿಸರ್ವ್ ಲಿಮಿಟೆಡ್ ಬಳಿ ಸುಮಾರು 3.372 ಮಿಲಿಯನ್ ಟನ್ ಕಚ್ಚಾ ತೈಲ ಸಂಗ್ರಹವಿದ್ದು, ಇದು ಒಟ್ಟು ಸಾಮರ್ಥ್ಯದ ಸುಮಾರು ಶೇ.64 ರಷ್ಟುಮಾತ್ರಎಂದು ತಿಳಿಸಿದ್ದಾರೆ. ಮಧ್ಯಪ್ರಾಚ್ಯದಲ್ಲಿ ಯುದ್ಧ ಸನ್ನಿವೇಶ ಉಂಟಾದ ನಂತರ ತೈಲ, ನೈಸರ್ಗಿಕ ಅನಿಲ ಮತ್ತು ಎಲ್‌ಪಿಜಿ ಪೂರೈಕೆ ವ್ಯತ್ಯಯವಾಗುವ ಸಾಧ್ಯತೆಯಿಂದ ಈ ಸಂಗ್ರಹಣೆ ಮಹತ್ವ ಪಡೆದುಕೊಂಡಿದೆ. ಪ್ರಸ್ತುತ ಹಣಕಾಸು ವರ್ಷದಲ್ಲಿ ಮೊದಲ 11 ತಿಂಗಳಲ್ಲಿ ಭಾರತವು ಸುಮಾರು 226 ಮಿಲಿಯನ್ ಟನ್ ಕಚ್ಚಾ ತೈಲ ಆಮದು ಮಾಡಲು 110 ಬಿಲಿಯನ್ ಅಮೆರಿಕನ್ ಡಾಲರ್ ವೆಚ್ಚ ಮಾಡಿದೆ.

ಈ ಆಮದುಗಳಲ್ಲಿ ಅರ್ಧದಷ್ಟು ಸೌದಿ ಅರೇಬಿಯಾ, ಇರಾಕ್ ಮತ್ತು ಯುಎಇ ದೇಶಗಳಿಂದ ಬಂದಿದ್ದು, ಇವು ಹಾರ್ಮುಜ್ ಜಲಸಂಧಿ ಮೂಲಕ ಸಾಗಣೆ ಮಾಡಲಾಗುತ್ತದೆ. ಇದೇ ಅವಧಿಯಲ್ಲಿ, ದೇಶದಲ್ಲಿ ಬಳಕೆಯಾಗುವ ನೈಸರ್ಗಿಕ ಅನಿಲದ ಅರ್ಧದಷ್ಟು ಆಮದು ಮಾಡಲು 12.4 ಬಿಲಿಯನ್ ಡಾಲರ್ ವೆಚ್ಚವಾಗಿದೆ. ಜೊತೆಗೆ, ದೇಶದ ಎಲ್‌ಪಿಜಿ ಅಗತ್ಯದ ಶೇ.60 ವಿದೇಶಗಳಿಂದಲೇ ಬಂದಿದೆ ಎಂದರು. ಎಲ್‌ಪಿಜಿಯ ಶೇ. 85 ರಿಂದ 95 ಹಾಗೂ ಅನಿಲದ ಸುಮಾರು ಶೇ.30 ಹಾರ್ಮುಜ್ ಜಲಸಂಧಿಯ ಮೂಲಕ ಸಾಗುತ್ತದೆ. ಕಚ್ಚಾ ತೈಲ ಪೂರೈಕೆಯ ವ್ಯತ್ಯಯವನ್ನು ರಷ್ಯಾ, ಪಶ್ಚಿಮ ಆಫ್ರಿಕಾ, ಅಮೆರಿಕಾ ಮತ್ತು ಲ್ಯಾಟಿನ್ ಅಮೆರಿಕಾ ದೇಶಗಳಿಂದ ಭಾಗಶಃ ಭರ್ತಿ ಮಾಡಲಾಗಿದೆ.

ಆದರೆ ಅನಿಲ ಮತ್ತು ಎಲ್‌ಪಿಜಿ ಪೂರೈಕೆ ಕೈಗಾರಿಕಾ ಮತ್ತು ವಾಣಿಜ್ಯ ಬಳಕೆದಾರರಿಗೆ ಕಡಿಮೆಯಾಗಿದೆ.ಎಂದಿದ್ದಾರೆ. 2021ರ ಜುಲೈನಲ್ಲಿ ಸರ್ಕಾರವು ಒಡಿಶಾದ ಚಂದಿಖೋಲ್ (4 ಮಿಲಿಯನ್ ಟನ್) ಮತ್ತು ಕರ್ನಾಟಕದ ಪಾದೂರು (2.5 ಮಿಲಿಯನ್ ಟನ್) ಪ್ರದೇಶಗಳಲ್ಲಿ

4ನೇ ಪುಟಕ್ಕೆ

# ಬಲಿದಾನ ಪದಕ ಪಡೆದ ಪ್ರಥಮ ಮಹಿಳಾ ಸೇನಾಧಿಕಾರಿ ಕನ್ನಡತಿ ದೀಕ್ಷಾ



ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಕನ್ನಡತಿ, ದಾವಣಗೆರೆಯ ಮೇಜರ್ ದೀಕ್ಷಾ ಮುಡದೇವಣ್ಣನವರ್ ಅರೆಸೇನಾಪಡೆಯ ಬಲಿದಾನ ಪದಕ ಪಡೆದ ಪ್ರಥಮ ಮಹಿಳೆ ಎಂಬ ಶ್ರೇಯಕ್ಕೆ ಪಾತ್ರರಾಗಿದ್ದಾರೆ.ಪುರುಷರ ಪ್ರಾಬಲ್ಯದ ಎದುರು ಈ ಶೌರ್ಯ ಪದಕಕ್ಕೆ ಭಾಜನರಾಗಿರುವ ಪ್ರಥಮ ಮಹಿಳಾ ಸೇನಾಧಿಕಾರಿ ಎಂಬ ಹಿರಿಮೆ ಹೊತ್ತಿದ್ದಾರೆ.

ದಾವಣಗೆರೆಯಲ್ಲಿ ಹುಟ್ಟಿ ಬೆಳೆದ ದೀಕ್ಷಾ ಶಾಲಾ ದಿನಗಳಲ್ಲಿಯೇ ತಮ ಶೌರ್ಯ ಜೀವನಕ್ಕೆ ಮುನ್ನುಡಿ ಬರೆದರು. ನ್ಯಾಷನಲ್ ಕೆಡೆಟ್ ಕಾರ್ಪ್?ಸ (ಎನ್‌ಸಿಸಿ)ಗೆ ಸೇರ್ಪಡೆಗೊಂಡು ಗಳಿಸಿದ ತರಬೇತಿ ಅವರಲ್ಲಿ ಶಿಸ್ತು, ಸೇವಾಭಾವನೆ ಮತ್ತು ತಾಳೆಯನ್ನು ಬೆಳೆಸಿದವು. ದೇಶಪ್ರೇಮಿಗಳ ಕಥೆಗಳಿಂದ ಸ್ಫೂರ್ತಿ ಪಡೆದ ದೀಕ್ಷಾ ತಾನು ದೇಶಕ್ಕೆ ಅರ್ಥಪೂರ್ಣ ಸೇವೆ ಸಲ್ಲಿಸಬೇಕೆಂಬ ಕನಸು ಕಂಡರು. ಮಿಲಿಟರಿ ಸೇರಿ ವೈದ್ಯಕೀಯ ಶಿಕ್ಷಣ ಪಡೆದರು. 2019 ರಲ್ಲಿ ಶಾರ್ಟ್ ಸರ್ವೀಸ್ ಕಮಿಷನ್ (ಎಸ್‌ಎಸ್‌ಸಿ)ಗೆ ಅರ್ಜಿ ಹಾಕಿ ಸೇನೆಗೆ ಸೇರ್ಪಡೆಯಾದರು. ವೈದ್ಯಕೀಯದಲ್ಲಿ ಪರಿಣತಿ ಸಾಧಿಸಿದರು.

ಎಸ್‌ಎಸ್‌ಸಿಗೆ ಆಯ್ಕೆಯಾದ ಬಳಿಕ ಅವರು ಲಖನೌದ ಆರ್ಮಿ ಮೆಡಿಕಲ್ ಕಾರ್ಪ್?ಸ ಸೆಂಟರ್‌ನಲ್ಲಿ ಕಠಿಣ ತರಬೇತಿ ಪಡೆದರು. ಇಲ್ಲಿ ಅವರು ಮೆಡಿಕಲ್ ಆಫೀಸರ್‌ರಸ ಬೇಸಿಕ್ ಕೋರ್ಸ್ (ಎಂಓಬಿಸಿ) ಪೂರೈಸಿ ಸೇನಾ ಸಿಬ್ಬಂದಿಯ ತುರ್ತು ಚಿಕಿತ್ಸೆ ಮತ್ತು ಕಾಯಿಲೆಗಳಿಗೆ ಚಿಕಿತ್ಸೆ ನೀಡಲಾರಂಭಿಸಿದರು. ಗುಡ್ಡಗಾಡು ಪ್ರದೇಶವಾದ ತಾಂಗ್‌ಸೆಯ 303 ಫೀಲ್?ಡ ಆಸ್ಪತ್ರೆಗೆ ನಿಯೋಜಿತರಾದ ದೀಕ್ಷಾ ಅಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದರು. 2022 ರಲ್ಲಿ ರೆಜಿಮೆಂಟಲ್ ಮೆಡಿಕಲ್ ಆಫೀಸರ್ (ಆರ್‌ಎಂಒ) ಆಗಿ ಪ್ಯಾರಾಶೂಟ್ ರೆಜಿಮೆಂಟ್‌ಗೆ ನಿಯುಕ್ತರಾದರು.

ತಮ ಅಮೂಲ್ಯ ಸೇವೆಗೆ ಸಂದ ಗೌರವವಾಗಿ ಮೇಜರ್ ಹುದ್ದೆಗೆ ಮುಂಬಡ್ತಿ ಪಡೆದ ದೀಕ್ಷಾ 2024 ರ ಬಲಿದಾನ ಪದಕಕ್ಕೆ ಪಾತ್ರರಾದರು. ಈ ಪದಕ ಸೇನೆಯಲ್ಲಿ ಶೌರ್ಯದಿಂದ ಕೆಲಸ ಮಾಡಿದ ಅಪಾರ ದೇಶಪ್ರೇಮ ಪ್ರದರ್ಶಿಸಿದವ-ರಿಗೆ ನೀಡುವ ಉನ್ನತ ಗೌರವವಾಗಿದೆ.

## ವಚನಗಳಿಂದ ಸಮಾಜದ ಸಮಸ್ಯೆಗಳಿಗೆ ಪರಿಹಾರ: ಕೆ.ಈ.ನರಸಿಂಹ

ನೈಜ್ಯ ದೆಸೆ ನ್ಯೂಸ್

ಮಾನ್ವಿ: ಹನ್ನೆರಡನೆಯ ಶತಮಾನದ ವಚನಕಾರರಲ್ಲಿ ಅಗ್ರಗಣ್ಯರಾದ ಜೇಡರ ದಾಸಿಮಯ್ಯ ದೇವ-ರಿಗೇ ಸವಾಲು ಹಾಕಿದ ಗಟ್ಟಿಗ ವ್ಯಕ್ತಿತ್ವ ಹೊಂದಿದವರು ಎಂದು ತಾಲೂಕು ನೇಕಾರ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಕೆ.ಈ.ನರಸಿಂಹ ಹೇಳಿದರು.

ಅವರು ತಾಲೂಕು ಆಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಆದ್ಯ ವಚನಕಾರ ಜೇಡರ ದಾಸಿಮಯ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಯ ವಚನ ಸಾಹಿತ್ಯವು ಜಾಗತಿ-ಕ ಮಹತ್ವ ಪಡೆದಿದ್ದು, ದಾಸಿಮಯ್ಯರ ವಚನಗಳು ಸಮಾಜದ ಸರ್ವರ ಬದುಕಿನ ಸಮಸ್ಯೆಗಳನ್ನು ನಿವಾರಿಸಲು



ಸಹಕಾರಿಯಾಗಿವೆ ಎಂದು ಹೇಳಿದರು. ಮಾತಿನ ಉದ್ದಕ್ಕೂ ದಾಸಿಮಯ್ಯರ ವಚನಗಳನ್ನು ಉದಾಹರಣೆ ನೀಡಿ ಅವರ ಸಂದೇಶಗಳನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ನೇಕಾರ ಸಮುದಾಯದ ಗುಮ್ಮಾ ಬಸವರಾಜ ವಕೀಲರು, ಮಸ್ಕಿ ಗಂಗಾಧರ, ಜಿ.ಶಿವುಕುಮಾರ, ಜಿ.ಪ್ರೇಮಕುಮಾರ, ಸತೀಶಕುಮಾರ, ಪ್ರದೀಪ್, ಮಾರ್ಕಂಡಯ್ಯ, ಸಿದ್ರಾಮ ಬುದ್ದಿ, ಸುಶಿಲಮ್ಮ ಸೇ-ರಿದಂತೆ ಅನೇಕರು ಭಾಗವಹಿಸಿದ್ದರು. ತಹಶೀಲ್ದಾರ ರಾಮಸಮುದ್ರ ಅಧ್ಯಕ್ಷತೆ ವಹಿಸಿದ್ದರು.

## ವರದಿ ತಿರಸ್ಕರಿಸಿ ಮಾ.25ರಂದು ಬೃಹತ್ ಪ್ರತಿಭಟನೆ

ನೈಜ್ಯ ದೆಸೆ ನ್ಯೂಸ್

ಮಾನ್ವಿ: ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟದ ವತಿಯಿಂದ ಜ್ಞಾನಪ್ರಕಾಶ ಸ್ವಾಮೀಜಿರವರ ನೇತೃತ್ವದಲ್ಲಿ ಒಳಮೀಸಲಾತಿ ರೋಸ್ಟರ್ ಹಂಚಿಕೆ ವಿರೋಧಿಸಿ ಮತ್ತು ಹಳೆ ಮೀಸಲಾತಿ ನಿಯಮದಂತೆ ತ್ವರಿತ ನೇಮಕಾತಿಗೆ ಆಗ್ರಹಿಸಿ.

ಒಳಮೀಸಲಾತಿ ವಿಷಯದಲ್ಲಿ ನಾಗಮೋಹನ್ ದಾಸ್ ಆಯೋಗ ನೀಡಿರುವ ಅವೈಜ್ಞಾನಿಕ ವರದಿಯನ್ನು ತಿರಸ್ಕರಿಸುವಂತೆ ಸರ್ಕಾರವನ್ನು ಒತ್ತಾಯಿಸಿ ಮಾ.25 ರಂದು ಬೆಳಿಗ್ಗೆ 11ಗಂಟೆಗೆ ಬೆಂಗಳೂರಿನ ಫ್ರೀಡಂ



ಪಾರ್ಕ್ ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಸಮುದಾಯದ ಮುಂದಿನ ಪೀಳಿಗೆಯ ಹಿತದೃಷ್ಟಿಯಿಂದ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಸಾಮಾಜಿಕ ಕಾರ್ಯಕರ್ತ ಹಾಗೂ ದಲಿತ ವಿದ್ಯಾರ್ಥಿ ಪರಿಷತ್ ತಾಲೂಕ ಅಧ್ಯಕ್ಷರು ಬಂಡೆಗಳು ಕರೆಗುಡ್ಡ ನೀಡಿದ್ದಾರೆ.

ರಾಜ್ಯ ಸರ್ಕಾರ ಪರಿಶಿಷ್ಟ ಜಾತಿಗಳಿಗೆ ಅವೈಜ್ಞಾನಿಕ ಒಳಮೀಸಲಾತಿ ಹಾಗೂ ರೋಸ್ಟರ್ ಪದ್ಧತಿ ಜಾರಿ ಮಾಡಿದ್ದು ಈ ಅನ್ಯಾಯ ಸರಿಪಡಿಸಲು ಆಗ್ರಹಿಸಿ ಈ ಸಮಾವೇಶ ಆಯೋಜಿಸಿದ್ದು ನಮ್ಮ ಸಮುದಾಯಗಳ ಪ್ರತಿ ಮನೆಯಿಂದ ಒಬ್ಬ ಸದಸ್ಯ ಭಾಗವಹಿಸುವ ಮೂಲಕ ಶಕ್ತಿ ಪ್ರದರ್ಶನ ಮಾಡಬೇಕಾಗಿದೆ ಎಂದು ತಿಳಿಸಿದ್ದಾರೆ.

## ರಾಜ್ಯದ ಹೋಟೆಲ್ ಮಾಲೀಕರಿಗೆ ಗುಡ್ ನ್ಯೂಸ್ :ಹೆಚ್ಚುವರಿ 1 ಸಾವಿರ ಕಮರ್ಷಿಯಲ್ ಸಿಲಿಂಡರ್ ಪೂರೈಕೆ: ಮುನಿಯಪ್ಪ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಹೋಟೆಲ್ ಮಾಲೀಕರಿಗೆ ಗುಡ್ ನ್ಯೂಸ್ ಸಿಕ್ಕಿದೆ. ರಾಜ್ಯದಲ್ಲಿ ಹೆಚ್ಚುವ-ರಿಯಾಗಿ 1 ಸಾವಿರ ಕಮರ್ಷಿಯಲ್ ಸಿಲಿಂಡರ್ ಪೂರೈಕೆ ಮಾಡಲಾಗುವುದು ಎಂದು ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದರು.

ಗ್ಯಾಸ್ ಕಂಪನಿಗಳು ಮತ್ತು ಹೋಟೆಲ್ ಸಂಘದ ಜೊತೆ ಸಚಿವ ಮುನಿಯಪ್ಪ ಇಂದು ಸಭೆ ನಡೆಸಿದರು. ರಾಜ್ಯದಲ್ಲಿ ಹೆಚ್ಚುವ-ರಿಯಾಗಿ ಕಮರ್ಷಿಯಲ್ ಸಿಲಿಂಡರ್ ಪೂರೈಕೆ ಮಾಡಲಾಗುವುದು. ಹೆಚ್ಚುವ-ರಿಯಾಗಿ 1,000 ಸಿಲಿಂಡರ್ ಸೇರಿಸಿ ಒಟ್ಟು 10,000 ಸಿಲಿಂಡರ್ ಪೂರೈಕೆ ಆಗಲಿದೆ. ಕಮರ್ಷಿಯಲ್ ಗ್ಯಾಸ್ ಬಳಕೆದಾರರು ಕಡ್ಡಾಯವಾಗಿ ರಿಜಿಸ್ಟರ್ ಮಾಡಿಸಬೇಕು. ಗೇಲ್ ಕಂಪನಿಗೆ ರಿಜಿಸ್ಟರ್ ಮಾಡಿಕೊಳ್ಳುವುದು ಕಡ್ಡಾಯ. ಒಂದು ವಾರದೊಳಗೆ ರಿಜಿಸ್ಟರ್ ಮಾಡಬೇಕು. ಅಕ್ರಮ ತಡೆಯಲು ಈ ಕ್ರಮಕೈಗೊಳ್ಳಲಾಗಿದೆ ಎಂದು ಸಚಿವರು ಹೇಳಿದರು.

10 ಸಾವಿರ ಸಿಲಿಂಡರ್‌ನಲ್ಲಿ ಕಮರ್ಷಿಯಲ್ ಗ್ಯಾಸ್ ವ್ಯಾಪ್ತಿಗೆ ಬರುವ



ಎಲ್ಲಾ ವಲಯಕ್ಕೆ ಹಂಚಿಕೆ ಆಗುತ್ತೆ. ಅದರಲ್ಲಿ ಹೋಟೆಲ್, ಇಂದಿರಾ ಕ್ಯಾಂಟೀನ್, ಪಿಜಿ ಇನ್ನಿತರ ವಲಯಕ್ಕೂ ಹಂಚಿಕೆಯಾಗಲಿದೆ. ಮುಂದಿನ ಸೋಮವಾರ ಮತ್ತೆ ಹೋಟೆಲ್ ಮಾಲೀಕರ ಜತೆ ಸಭೆ ಮಾಡಲಾಗುವುದು. ಕಳೆದ ವಾರ ಒಂದು ಸಾವಿರ ಸಿಲಿಂಡರ್ ಹೋಟೆಲ್‌ಗೆ ನೀಡಲಾಗುತ್ತಿತ್ತು. ಸದ್ಯ ಹೋಟೆಲ್, ಡಾಬಾ, ಹಾಸ್ಟೆಲ್, ಇಂದಿರಾ ಕ್ಯಾಂಟೀನ್‌ಗೆ ನೀಡಲಾಗುವುದು ಎಂದು ಮಾಹಿತಿ ನೀಡಿದರು. ಹೋಟೆಲ್ ಮಾಲೀಕರ ವಿದ್ಯುತ್ ಬಿಲ್ ಕಡಿಮೆ ಮಾಡುವ ವಿಚಾರದ ಬಗ್ಗೆ ಮಾತನಾಡಿ, ಅದು ನನ್ನ ಗಮನಕ್ಕೆ ಬಂದಿಲ್ಲ. ಸಿಎಂಗೆ ಪತ್ರ ಬರೆದಿದ್ದಾರೆ. ಸಿಎಂ ಗಮನಕ್ಕೆ ತರಲಾಗುವುದು ಎಂದು ಸಚಿವರು ತಿಳಿಸಿದರು.

ಪ್ರತಿ ಯೂನಿಟ್‌ಗೆ 2 ರೂ. ಕಡಿಮೆ ಮಾಡಿ ಅಂತ ಹೋಟೆಲ್ ಮಾಲೀಕರು ಮನವಿ ಮಾಡಿದ್ದರು. ಇನ್ಮುಂದೆ ಕಮರ್ಷಿಯಲ್ ಸಿಲಿಂಡರ್ ಬಳಕೆ ಮಾಡುವವರಿಗೆ ನೋಂದಣಿ ಕಡ್ಡಾಯ. ಗೇಲ್ ಕಂಪನಿ ಜತೆ ನೋಂದಣಿ ಮಾಡಬೇಕು. ನೋಂದಣಿ ಮಾಡಿಕೊಳ್ಳಲಿಲ್ಲ ಅಂದ್ರೆ ಕಮರ್ಷಿಯಲ್ ಗ್ಯಾಸ್ ಸಿಗಲ್ಲ. ಯಾರು ಎಷ್ಟು ಬಳಕೆ ಮಾಡ್ತಿದ್ದಾರೆ ಎನ್ನುವುದರ ಮಾಹಿತಿ ಸಿಗಲಿದೆ. ಮುಂದಿನ ಶನಿವಾರದೊಳಗೆ ನೋಂದಣಿ ಕಡ್ಡಾಯ ಎಂದು ತಿಳಿಸಿದರು.

## ಸಾಹಿತ್ಯ ಸಿಂಚನ

ಬಿಂಬ–ಪ್ರತಿಬಿಂಬ.

ಬದುಕೆಂದರೆ..
ಒಬ್ಬನನ್ನು ಕೆಡವಲು
ಕಾಲೆಳೆದು ಬೀಳಿಸಲು
ಗೆಲುವು ಕಸಿದುಕೊಳ್ಳಲು
ಹಲವರು ಕೈಕೈ ಬೆಸೆದು
ನಿಂತಿರುವ ಕಬಡ್ಡಿಯಂತೆ.!

ಬದುಕೆಂದರೆ..
ಒಬ್ಬನನ್ನು ಹಿಡಿಯಲು
ಹಲವರು ಹೊಂಚುಹಾಕಿ
ಕಾದು ಕುಳಿತು ನೋಡುತ್ತ
ಪರಸ್ಪರ ಛೂ ಬಿಡುತ್ತಾ
ಬೆನ್ನತ್ತುವ ಖೋಖೋದಂತೆ.!

ಬದುಕೆಂದರೆ..
ಚೆಂಡನ್ನು ನಮ್ಮೆಡೆಗೆ ಎಸೆದು
ಹೊಡೆಯಲು ಪ್ರೇರೇಪಿಸುತ್ತಾ
ಹೊಡೆದೊಡನೆ ಹಿಡಿಯಲು
ಸುತ್ತಲೂ ಬಕಪಕ್ಷಿಗಳಂತೆ ನಿಂತು
ಕಾಯ್ವ ಕ್ರಿಕೆಟ್ಟಿನಾಟದಂತೆ.!

ಬದುಕೆಂದರೆ..
ಕಾಲಡಿಯಿಂದ ಚೆಂಡು ಕಸಿದು
ನಮ್ಮ ಕೋಟೆಯೊಳಗೆ ನುಗ್ಗಿ
ನಮ್ಮನ್ನು ನಮ್ಮವರನ್ನು ವಂಚಿಸಿ
ನಮ್ಮದೇ ಗೋಲೊಳಗೇ ಬಾರಿಸಿ
ಬೀಗುವ ಕಾಲ್ಚೆಂಡಿನಾಟದಂತೆ.!

ಬದುಕೆಂದರೆ..
ನಮ್ಮೆಲ್ಲ ಬಲಾಬಲಗಳ ಲೆಕ್ಕಿಸಿ
ಒಂದೊಂದೆ ಪಡೆಗಳ ಮಣಿಸಿ
ಎದುರಾಳಿ ಎಲ್ಲಕಡೆಯಿಂದಲೂ
ಆವರಿಸಿ ಆಕ್ರಮಿಸಿ ಒಂಟಿಯಾಗಿಸಿ
ಸೋಲಿಸುವ ಚದುರಂಗದಂತೆ.!

ಬದುಕೆಂದರೆ ಆಟಗಳ ಮಾಯೆ
ಬದುಕಿನ ತುಂಬೆಲ್ಲ ಆಟದ ಛಾಯೆ.!
ಬದುಕಿನ ಪ್ರತಿ ಮಜಲೂ ಸೋಲು
ಗೆಲುವಿನ ಹಾವುಯೇಣಿಯಾಟದ ಬಿಂಬ.!
ಪ್ರತಿ ಆಟವೂ ಬದುಕಿನದೇ ಪ್ರತಿಬಿಂಬ.!

ಎ.ಎನ್.ರಮೇಶ್. ಗುಬ್ಬಿ.

## ನಾಳೆ ಶಿರಡಿ ಸಾಯಿಬಾಬಾ ಅವರ ಜಯಂತ್ಯೋತ್ಸವ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಪಟ್ಟಣದ ಸಾಯಿಬಾಬಾ ಸೇವಾಟ್ರಸ್ಟ ವತಿಯಿಂದ ಶಿರಡಿ ಸಾಯಿಬಾಬಾ ಜಯಂತ್ಯೋತ್ಸವ ಹಾಗೂ 22ನೆಯ ವಾರ್ಷೀಕೋತ್ಸವ ಕಾರ್ಯಕ್ರಮವು ವಾಸವಿ ಕಲ್ಯಾಣಮಂಟಪದಲ್ಲಿ ನಾಳೆ (ಮಾ.26)ರಂದು ಗುರುವಾರ ಜರುಗಲಿದೆ.**



ಅಂದು ಬೆಳಿಗ್ಗೆ 7.30ಗಂಟೆಗೆ ನಿಮಿಷಾಂಬಾದೇವಿ ಗುಡಿಯಿಂದ ವಾಸವಿ ಕಲ್ಯಾಣ ಮಂಟಪದವರೆಗೆ ಪಲ್ಲಕ್ಕಿ ಉತ್ಸವ, 9.15ಕ್ಕೆ ಪ್ರಾರ್ಥನೆ, 9.30ಕ್ಕೆ ಸಾಯಿಬಾಬಾರವರ ಮಹಾಪೂಜೆ ಹಾಗೂ ಪಂಚಾಮೃತ ಅಭಿಷೇಕ, 10.30ಕ್ಕೆ ಸಾಯಿಬಾಬಾರ ತೊಟ್ಟಿಲ ಸೇವೆ, ಭಜನಾ ಕಾರ್ಯಕ್ರಮ, ಸಾಯಿ ಭಕ್ತರಿಂದ ಸಂಗೀತ ಸೇವೆ. ವೇ.ಮೂ.ಸಂತೋಷ ಆನಂದಭಟ್ ಜೋಶಿ ಅವ–ರಿಂದ ಸಾಯಿ ಕಥಾಮೃತ, ಮಹಾಮಂಗಳಾರತಿ ನಂತರ ಮಹಾಪ್ರಸಾದ ನಡೆಯುವುದು ಎಂದು ಅಧ್ಯಕ್ಷ ಬಸವರಾಜ ಮದರಕಲ್ಲ ಹಾಗೂ ಉಪಾಧ್ಯಕ್ಷ ಎಂ.ಜಿ.ಪಾಟೀಲ ಗುಂಡಕನಾಳ ಅವರು ಪ್ರಕಟಣೆಯಿಲ್ಲಿ ತಿಳಿಸಿದ್ದಾರೆ.

## ಅಂಬೇಡ್ಕರ್ ವಿಚಾರಗಳನ್ನು ಅರಿತು ಅಳವಡಿಸಿಕೊಳ್ಳಬೇಕು: ಸಂಪತ್ತುರಾಜ್ ಜಾಗೀರಪನ್ನೂರ

ನೈಜ್ಯ ದೆಸೆ ನ್ಯೂಸ್





**ಮಾನ್ವಿ: ದೇಶದಲ್ಲಿ ಅನೇಕ ಮಹಾತ್ಮರು, ಸಾಧು ಸಂತರು ಹುಟ್ಟಿ ವಿಚಾರಗಳನ್ನು ಸಾರಿದರೂ, ಬಾಬಾಸಾಹೇಬ್ ಅಂಬೇಡ್ಕರ್ ಅಸ್ಪೃಶ್ಯ ಜಾತಿಯಲ್ಲಿ ಹುಟ್ಟಿ ಸ್ವತಃ ಅವಮಾನ ಮತ್ತು ನೋವುಗಳನ್ನು ಅನುಭವಿಸಿ, ಬಹುಜನರು ಘನತೆ ಮತ್ತು ಗೌರವದಿಂದ ಬದುಕಲು ಸಂವಿಧಾನಬದ್ಧ ಹಕ್ಕುಗಳನ್ನು ನೀಡಿದ ಶೋಷಿತರ ವಿಮೋಚಕ ಎಂದು ಬಹುಜನ ಸಂಘರ್ಷ ಸಮಿತಿ ರಾಯಚೂರು ಜಿಲ್ಲಾಧ್ಯಕ್ಷ ಸಂಪತ್ತುರಾಜ್ ಜಾಗೀರಪನ್ನೂರ ಹೇಳಿದರು.**

ಅವರು ತಾಲೂಕಿನ ಮದ್ಲಾಪೂರ ಗ್ರಾಮದ ಬಿ.ರಾಣಿ–ಭೀಮಣ್ಣ ಅವರ ಮನೆಯಲ್ಲಿ ಸೋಮವಾರ ಆಯೋಜಿಸಿದ್ದ 123ನೇ ಮನೆ ಮನೆಗೆ ಅಂಬೇಡ್ಕರ್ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದರು. ದಲಿತರು ಮತ್ತು ಶೋಷಿತರು ಮೌಢ್ಯಗಳನ್ನು ಬಿಟ್ಟು ಉತ್ತಮ ಶಿಕ್ಷಣ ಪಡೆದು ಜಾಗೃತರಾಗಿ ಸ್ವಾಭಿಮಾನದ ಬದುಕು ನಡೆಸಬೇಕು ಎಂದು ಅವರು ಕರೆ ನೀಡಿದರು. ಬಹುಜನ ಸಂಘರ್ಷ ಸಮಿತಿ ಸಂಸ್ಥಾಪಕ ಅಧ್ಯಕ್ಷ ಜೆ.ಶರಣಪ್ಪ ಬಲ್ಲಟಗಿ ಪ್ರಾಸ್ತಾವಿಕವಾಗಿ ಮಾತನಾಡಿ, ಮನೆ ಮನೆಗೆ ತಲುಪಿ ಮಹಿಳೆ ಮತ್ತು ಮಕ್ಕಳನ್ನು ಗುರಿಯಾಗಿಸಿಕೊಂಡು ಸರಳ ರೀತಿಯಲ್ಲಿ ಅಂಬೇಡ್ಕರ್ ವಿಚಾರಗಳನ್ನು ತಲುಪಿಸುವುದು ಮಹತ್ವದ ಕಾರ್ಯವಾಗಿದ್ದು, ರಾಜ್ಯಾದ್ಯಂತ ಶೋಷಿತರ ನಿಜವಾದ ಇತಿಹಾಸವನ್ನು ಪರಿಚಯಿಸುವ ಪ್ರಯತ್ನವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳಾದ ಕಮಲ, ಜಯಲಲೀತಾ ಮತ್ತು ಕೀರ್ತನಾ ಸಂವಿಧಾನ ಪೀಠಿಕೆ ಓದುವ ಮೂಲಕ ಉದ್ಘಾಟಿಸಿದರು. ದಲಿತ ಸಂಘರ್ಷ ಸಮಿತಿ (ಬಿ.ಕೆ. ಬಣ) ತಾಲೂಕ ಸಂಚಾಲಕ ಭೀಮಣ್ಣ ಮದ್ಲಾಪೂರ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮವನ್ನು ಕುಮಾರ್ ಕಾತರಕಿ ನಿರೂಪಿಸಿ ವಂದಿಸಿದರು. ಈ ಸಂದರ್ಭದಲ್ಲಿ ಯಮುನಪ್ಪ ಜಾಗೀರಪನ್ನೂರ, ಬಸವರಾಜ್ ಗವಿಗಟ್, ಮರಿಸ್ವಾಮಿ ಅಮರಾವತಿ, ಶಿವರಾಜ ಮರಾಟ, ಹುಸೇನಪ್ಪ ಜಗ್ಗಿ ಜಾಗೀರಪನ್ನೂರ, ರವಿಕುಮಾರ್ ಮದ್ಲಾಪೂರ, ಹನುಮೇಶ್, ಇಮಾನ್ ವೇಲ್, ಹುಸೇನಪ್ಪ (ಗ್ರಾಮ ಪಂಚಾಯಿತಿ ಸದಸ್ಯ), ಮಹಾದೇವ, ಬೆಂಜಮೀನ್, ಅನಿಲ್ ಕುಮಾರ್, ಎಲ್ಲೇಶ್, ಬೈಲಪ್ಪ, ನರಸಪ್ಪ, ದುರುಗಪ್ಪ ಸಾದಾಪೂರ, ಶಾಂತರಾಜ್, ಕವಿತಾ, ಸುಮಂಗಲ, ಲಲಿತಮ್ಮ ಮದ್ಲಾಪೂರ ಸೇರಿದಂತೆ ಮಹಿಳೆಯರು ಮತ್ತು ಮಕ್ಕಳು ಭಾಗವಹಿಸಿದ್ದರು.

## ಮಸ್ಕಿಯಲ್ಲಿ ನಾಗಮೋಹನದಾಸ ಒಳಮೀಸಲಾತಿ ವರದಿ ತಿರಸ್ಕರಿಸಲು ಒತ್ತಾಯಿಸಿ ರ‍್ಯಾಲಿ




ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಬಲಗೈ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸುವಂತೆ ಒತ್ತಾಯಿಸಿ ಮಾ.25 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯಲಿರುವ ಬೃಹತ್ ರ?ಯಾಲಿ ಸಮಾವೇಶಕ್ಕೆ ತಾಲೂಕಿನಿಂದ ಬಲಗೈ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಛಲವಾದಿ ಮಹಾಸಭಾದ ತಾಲೂಕಾಧ್ಯಕ್ಷ ಮೌನೇಶ ದೊಡ್ಮನಿ ಅಮೀನಗಡ ಮನವಿ ಮಾಡಿದರು.**

ಪಟ್ಟಣದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ನ್ಯಾಯಮೂರ್ತಿ ನಾಗಮೋಹನ್‌ದಾಸ ಆಯೋಗದ ಅವೈಜ್ಞಾನಿಕ ವರದಿಯನ್ನು ಯಾವುದೇ ಕಾರಣಕ್ಕೂ ಜಾರಿ ಮಾಡಬಾರದೆಂದು ರಾಜ್ಯ ಸರಕಾರಕ್ಕೆ ಒತ್ತಾಯಿಸಿದರು. ಆದ್ದರಿಂದ ಮಾ.25 ರಂದು ಹಮ್ಮಿಕೊಂಡಿರುವ ಬಲಗೈ ಸಮುದಾಯದ ಬೃಹತ್ ರ‍್ಯಾಲಿ ಸಮಾವೇಶಕ್ಕೆ ತಾಲೂಕಿನ ಪ್ರತಿಯೊಂದು ಹಳ್ಳಿ ಹಳ್ಳಿಗೂ ತೆರಳಿ ಜಾಗೃತಿ ಮೂಡಿಸಿದ್ದೇವೆ. ಮಾ.24 ರಂದು ಬೆಂಗಳೂ–ರಿಗೆ ತಾಲೂಕಿನಿಂದ ಸುಮಾರು 500ಕ್ಕೂ ಹೆಚ್ಚು ಜನರು ಭಾಗವಹಿಸಲಿದ್ದಾರೆ.

ಮಸ್ಕಿ ಸಾರಿಗೆ ಇಲಾಖೆ ಘಟಕದಿಂದ ಈಗಾಗಲೇ 2 ಬಸ್‌ಗಳ ವ್ಯವಸ್ಥೆ ಮಾಡಲಾಗಿದ್ದು, ಈ ರ?ಯಾಲಿ ಸಮಾವೇಶಕ್ಕೆ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ನಾಗಮೋಹನ್‌ದಾಸರ ವರದಿಯನ್ನು ತಿರಸ್ಕರಿಸಲು ಒತ್ತಾಯಿಸಿ ರ‍್ಯಾಲಿ ಸಮಾವೇಶಯನ್ನು ಯಶ್ವಸಿಗೊಳಿಸಬೇಕೆಂದು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಛಲವಾದಿ ಮಹಾಸಭಾದ ಗೌರವಾಧ್ಯಕ್ಷ ಮಲ್ಲಪ್ಪ ಗೋನಾಳ, ಪ್ರಧಾನ ಕಾರ್ಯದರ್ಶಿ ಹುಲಗಪ್ಪ ಹಸಮಕಲ್, ಶಿವರಡ್ಡಿ ಕಟ್ಟಿಮನಿ, ನೀಲಕಂಠಪ್ಪ ರಂಗಾಪೂರ ಇದ್ದರು.

## ರಾಯಚೂರು ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರು, ಸದಸ್ಯರ ಪ್ರವಾಸ

ನೈಜ್ಯ ದೆಸೆ ನ್ಯೂಸ್




**ರಾಯಚೂರು: ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಗೌರವಾನ್ವಿತ ಅಧ್ಯಕ್ಷರಾದ ಡಾ.ಟಿ.ಶ್ಯಾಮ್ ಭಟ್ ಹಾಗೂ ಸದಸ್ಯರಾದ ಎಸ್.ಕೆ ವಂಟಿಗೋಡಿ ಅವರು ಮಾರ್ಚ್ 25 ಹಾಗೂ 26ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.**

ಅವರು ಮಾರ್ಚ್ 25ರಂದು ಬೆಳಗ್ಗೆ 8.40ಕ್ಕೆ ಬೆಂಗಳೂರಿನಿಂದ ವಿಮಾನದ ಮೂಲಕ ಹೊರಟು ಬೆಳಗ್ಗೆ 10.10ಕ್ಕೆ ಹೈದ್ರಾಬಾದ್ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಬಳಿಕ 10.30ಕ್ಕೆ ಹೈದ್ರಾಬಾದ್ ವಿಮಾನ ನಿಲ್ದಾಣದಿಂದ ನಿರ್ಗಮಿಸಿ ರಸ್ತೆ ಮಾರ್ಗವಾಗಿ ಮಧ್ಯಾಹ್ನ 2.30ಕ್ಕೆ ರಾಯಚೂರು ನಗರಕ್ಕೆ ಆಗಮಿಸಿ ವಿಶ್ರಾಂತಿ ಮಾಡುವರು. ಮಧ್ಯಾಹ್ನ 3 ಗಂಟೆಯಿಂದ ಸಂಜೆ 6.30ರವರೆಗೆ ವಿವಿಧೆಡೆ ಭೇಟಿ ನೀಡುವರು.

ಬಳಿಕ ರಾಯಚೂರಿನ ಗೆಸ್ಟ್ ಹೌಸ್‌ನಲ್ಲಿ ವಾಸ್ತವ್ಯ ಹೂಡುವರು. ಮಾರ್ಚ್ 26ರ ಬೆಳಿಗ್ಗೆ 9.30 ರಿಂದ 11 ಗಂಟೆವರೆಗೆ ವಿವಿಧೆಡೆ ಭೇಟಿ ನೀಡುವರು. ಬಳಿಕ ಬೆಳಗ್ಗೆ 11 ರಿಂದ ಮಧ್ಯಾಹ್ನ 12 ಗಂಟೆವರೆಗೆ ಆಯೋಗದ ಸಭೆ ನಡೆಸುವರು. ಮಧ್ಯಾಹ್ನ 12 gangeyinda 1 ಗಂಟೆವರೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಂವಾದ ನಡೆಸುವರು. 1 ಗಂಟೆಯಿಂದ 1.30ರವರೆಗೆ ಪತ್ರಿಕಾಗೋಷ್ಠಿ ನಡೆಸುವರು. ಮಧ್ಯಾಹ್ನ 1.30 ರಿಂದ ಊಟದ ವಿರಾಮದ ಬಳಿಕ ಮಧ್ಯಾಹ್ನ 3 ಗಂಟೆಗೆ ರಾಯಚೂರ ನಗರದಿಂದ ನಿರ್ಗಮಿಸಿ ಹೈದ್ರಾಬಾದ್‌ಗೆ ತೆರಳಿ ಅಲ್ಲಿಂದ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳಸಲಿದ್ದಾರೆ ಎಂದು ಆಯೋಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಗೌತಮಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರತ ಸರ್ಕಾರದ ವಾರ್ತಾ ಶಾಖೆಯಿಂದ ಮಾರ್ಚ್ 25ರಂದು ಪತ್ರಕರ್ತರಿಗೆ ಕಾರ್ಯಾಗಾರ

ನೈಜ್ಯ ದೆಸೆ ನ್ಯೂಸ್




**ರಾಯಚೂರು: ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು ಹಾಗೂ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಇದೇ 25 ಬುಧವಾರದಂದು ರಾಯಚೂರಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಾರ್ತಾಲಾಪ ಕಾರ್ಯಾಗಾರ ಆಯೋಜಿಸಲಾಗಿದೆ.**

ಅಂದು ಬೆಳಗ್ಗೆ 10:30ಕ್ಕೆ ಕಾರ್ಯಕ್ರಮದ ಉದ್ಘಾಟನಾ ನೆರವೇರಲಿದ್ದು, ಜನಪ್ರತಿನಿಧಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿರಲಿದ್ದಾರೆ. ಕಾರ್ಯಾಗಾರದ ಮೊದಲ ಅಧಿವೇಶನದಲ್ಲಿ ವಿಕಸಿತ ಭಾರತ: ಜಿ ರಾಮ್ ಜಿ ಯೋಜನೆ ಕುರಿತು ರಾಯಚೂರು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣ ಬಸವರಾಜ ಅವರು ಉಪನ್ಯಾಸ ನೀಡುವರು. ಅಪರಾಧ ವರದಿಗಾರಿಕೆಯ ಜವಾಬ್ದಾರಿಗಳ ಕುರಿತು ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್.ಜೆ. ಕುಮಾರಸ್ವಾಮಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಯೋಜನೆಗಳ ಅನುಷ್ಠಾನ ಕುರಿತು ಇಲಾಖೆಯ ಜಿಲ್ಲಾ ಅಧಿಕಾರಿಗಳಾದ ಡಾ.ಸುರೇಂದ್ರ ಬಾಬು,

ಕೃಷಿ, ತೋಟಗಾರಿಕಾ ವಲಯದ ಯೋಜನೆಗಳ ಅನುಷ್ಠಾನದ ಕುರಿತು ರಾಯಚೂರು ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರಾದ ಡಾ. ತಿಪ್ಪಣ್ಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನೆಗಳ ಅನುಷ್ಠಾನದ ಕುರಿತು ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್ ಯು., ಹಣಕಾಸು ಸುರಕ್ಷತೆ ಮತ್ತು ಆರ್ಥಿಕ ಸಬಲೀಕರಣದ ಕುರಿತು ರಾಯಚೂರು ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಸುಧೀಂದ್ರ ಪಿ.ಆರ್. ಅವರು ಮಾಹಿತಿ

# ರಾಯಚೂರಿನ ಜಿಲ್ಲಾಡಳಿತದಿಂದ ದೇವರ ದಾಸಿಮಯ್ಯ ಜಯಂತ್ಯುತ್ಸವ

ನೈಜ್ಯ ದೆಸೆ ನ್ಯೂಸ್







**ರಾಯಚೂರು: ಸರಳ ಭಾಷೆಯಲ್ಲಿ ಸರ್ವರೂ ಅರಿಯುವಂತೆ ವಚನಗಳನ್ನು ರಚಿಸಿದ ಆದ್ಯ ವಚನಕಾರ, ನೇಕಾರ ಸಂತ ವಿಶ್ವಮಾನ್ಯ ಶರಣ ದೇವರ ದಾಸಿಮಯ್ಯ ಅವರು ಸ್ವಸ್ಥ ಸಮಾಜ ನಿರ್ಮಾಣದ ಆಶಯದೊಂದಿಗೆ ನಮಗೆಲ್ಲ ಸನ್ಮಾರ್ಗ ತೋರಿದ್ದಾರೆ ಎಂದು ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಹೇಳಿದರು.**

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಂ–ಯುಕ್ತಾಶ್ರಯದಲ್ಲಿ ಮಾರ್ಚ್ 23ರ ಸೋಮವಾರ ನಡೆದ ಶ್ರೀ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸಮಾಜದಲ್ಲಿ ಎಲ್ಲರೂ ಒಂದೇ ಆಗಿದ್ದಾರೆ. ಇಲ್ಲಿ ಜಾತಿ, ಲಿಂಗ, ಧರ್ಮ ಹಾಗೂ ವರ್ಣ ಬೇಧವಿಲ್ಲ. ಎಲ್ಲರೂ ಸಮನಾಗಿ, ಉತ್ತಮ ಜೀವನವನ್ನು ನಡೆಸಬೇಕೆಂಬ ಸಂದೇಶಗಳನ್ನು ತಮ್ಮ ವಚನಗಳ ಮೂಲಕ ಇಡೀ ಜಗತ್ತಿಗೆ ದಾಸಿಮಯ್ಯ ಅವರು ತಿಳಿಸಿದ್ದು, ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಬದುಕನ್ನು ರೂಪಿಸಿಕೊಳ್ಳಬೇಕು ಎಂದರು.

ರಾಯಚೂರು ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಶಾವಂತಗೇರಾ ಅವರು ಮಾತನಾಡಿ, ವಿಶ್ವ ಹಾಗೂ ಕನ್ನಡ ಸಾಹಿತ್ಯಕ್ಕೆ ವಚನ ಸಾಹಿತ್ಯದ ಕೊಡುಗೆ ಅಪಾರವಾಗಿದೆ ಎಂದು ತಿಳಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ ಅವರು ಮಾತನಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಒಂದು ವರ್ಷದಲ್ಲಿ ಸುಮಾರು 33 ಜಯಂತಿಗಳನ್ನು ಆಚ–'ರಣೆ ಮಾಡಲಾಗುತ್ತದೆ. ಅದರಲ್ಲಿ ದೇವರದಾಸಿಮಯ್ಯ ಜಯಂತಿಯೂ ಒಂದಾಗಿದ್ದು, ದೇವರ ದಾಸಿಮಯ್ಯನವರು ವಚನ ಸಂಗ್ರಹ ಹೊತ್ತಿಗೆಯ ಮೂಲಕ ಸಮಾಜಕ್ಕೆ ಉತ್ತಮ ಸಂದೇಶಗಳನ್ನು ನೀಡಿದ್ದಾರೆ. ರಾಮನಾಥ ಎಂಬ ಅಂಕಿತದಿಂದ ಹಲವು ವಚನಗಳನ್ನು ರಚಿಸಿ, ಸಮಾಜ–ಕ್ಕೆ ಉತ್ತಮ ಹಾದಿಯನ್ನು ಹಾಕಿಕೊಟ್ಟಿದ್ದಾರೆ ಎಂದರು. ಈ ವೇಳೆ ಉಪನ್ಯಾಸಕರಾಗಿ ಜಿಲ್ಲೆಯ ಮಾನ್ವಿ ಪಟ್ಟಣದ ಸಾಹಿತಿ ರಮೇಶಬಾಬು ಯಾಳಗಿ ಅವರು ಮಾತನಾಡಿ, ದಾಸಿಮಯ್ಯ ಜಯಂತಿ ಕೇವಲ ಒಂದು ಸಮಾಜ–ಕ್ಕೆ ಸೀಮಿತವಾಗದೇ. ಇಡೀ ಮನುಕುಲಕ್ಕೆ ಸಂಭ್ರಮದ ಹಬ್ಬವಾಗಬೇಕು. ಪ್ರತಿಯೊಬ್ಬರ ಬಾಳನ್ನು ಬೆಳಗಿಸುವ ಸದ್ಗುಣಗಳು ವಚನಗಳಲ್ಲಿ ಅಡಗಿದ್ದು, ವರ್ತನೆಗಳನ್ನು ಸರಿಪಡಿಸುವ, ಸರಿದಾರಿಯಲ್ಲಿ ನಡೆಯಲು ವಚನಗಳು ಸಹಕಾರಿಯಾಗಿವೆ ಎಂದು ಹೇಳಿದರು.

ದೇವರ ದಾಸಿಮಯ್ಯ ಅವರು ವಚನಗಳ ಮೂಲಕ ಸಾಮಾಜಿಕ ಅಸಮಾನತೆ ಹೋಗಲಾಡಿಸಲು ಶ್ರಮಿಸಿದರು. ಅವರ 176 ವಚನಗಳು ಇದುವರೆಗೂ ಲಭ್ಯವಾಗಿವೆ.

ದಾಸಿಮಯ್ಯನವರ ವಚನಗಳ ಸಾರವನ್ನು ಮಕ್ಕಳಿಗೆ ಯುವಜನತೆಗೆ ತಿಳಿಸಿ ಸುಸಂಸ್ಕೃತರನ್ನಾಗಿ ಮಾಡಬೇಕು ಎಂದರು. ನೇಯ್ಗೆ ವೃತ್ತಿಯನ್ನು ಮಾಡುತ್ತಿದ್ದ ದೇವರ ದಾಸಿಮಯ್ಯ ತಮ್ಮ ವಚನಗಳಲ್ಲಿ ಕಾಯಕ, ಭಕ್ತಿ, ಜ್ಞಾನ, ಸರಳತೆ, ವೈರಾಗ್ಯ, ಮುಕ್ತಿಗೆ ಪ್ರಾಧಾನ್ಯತೆ ನೀಡಿದ್ದಾರೆ. 12ನೇ ಶತಮಾನದಲ್ಲಿ ಆರಂಭವಾದ ವಚನ ಚಳವಳಿಗಿಂತ ಮೊದಲೇ ಸರಳ ವಚನಗಳನ್ನು ರಚಿಸಿದ ಆದ್ಯ ವಚನಕಾರ ಎಂಬ ಹೆಗ್ಗಳಿಕೆಗೆ ದಾಸಿಮಯ್ಯ ಪಾತ್ರರಾಗಿದ್ದಾರೆ. ಕನ್ನಡ ಸಾಹಿತ್ಯಕ್ಕೆ ಮೂಲವಾಗಿರುವ ವಚನ ಸಾಹಿತ್ಯದಿಂದ ಕನ್ನಡ ಸಾಹಿತ್ಯ ಶ್ರೀಮಂತ ಗೊಂಡಿದೆ. ಇದಕ್ಕೆ ದೇವರ ದಾಸಿಮಯ್ಯ ಕಾರಣಕರ್ತರು ಎಂದರು. ದೇವರ ದಾಸಿಮಯ್ಯ ವಚನಗಳ ಆದರ್ಶ ಹಾಗೂ ಮೌಲ್ಯಗಳನ್ನು ಪೋಷಕರು ಮಕ್ಕಳಲ್ಲಿ ತುಂಬಬೇಕು.

ಶ್ರೀಮಂತಿಕೆಯ ಜೀವನಕ್ಕಿಂತ ಶ್ರೀಮಂತ ಸಂಸ್ಕೃತಿ ಮಕ್ಕಳಿಗೆ ಕಲಿಸಬೇಕಾಗಿದೆ. ಮಹಾನ್ ಸಾಧಕರ ನಡೆನುಡಿಗಳನ್ನು ಅರ್ಥೈಸಬೇಕು ಎಂದರು.

ದೇವರ ದಾಸಿಮಯ್ಯ ಭಾವಚಿತ್ರ ಮೆರವಣಿಗೆಗೆ ಚಾಲನೆ: ಬೆಳಗ್ಗೆ ನಡೆದ ದೇವರ ದಾಸಿಮಯ್ಯ ಭಾವಚಿತ್ರದ ಮೆರವಣಿಗೆಗೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮ, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಮುಖಂಡರಾದ ರವಿ ಭೋಸರಾಜು, ನರಸಿಂಹಲು ಮಾಡಗಿರಿ, ಕೆ.ಶಾಂತಪ್ಪ ಅವರು ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಚಾಲನೆ ನೀಡಿದರು. ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಆರಂಭವಾದ ಮೆರವಣಿಗೆಯು ನಗರದ ಸಾರ್ವಜನಿಕ ಉದ್ಯಾನವನದ ಮಾರ್ಗವಾಗಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಸಾಗಿತು. ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಭಾಗವಹಿಸಿದ್ದವು. ಇದೇ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಜಿ.ನಾಗರಾಜ ಮಾನವಿ, ದೊಡ್ಡ ಈರಣ್ಣ, ಉದಯ ಕುಮಾರ್, ಹೆಚ್. ವೆಂಕಟೇಶ, ಮೈಕಲ್ ಬಾಬು, ದತ್ತಾತ್ರೇಯ, ವಿಠ್ಠಲ್, ಪುಷ್ಪವಂತಿ, ನಾಗರಾಜ್, ಶ್ರೀನಿವಾಸ ಕೆ.ಎನ್., ಶಿವಾನಂದ, ಬಸವರಾಜ ಸೇರಿದಂತೆ ಇತರು ಇದ್ದರು.

# ನೇಮಕಾತಿ ಪ್ರಕಟಣೆ

ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ, ಅರಮನೆ ರಸ್ತೆ, ಬೆಂಗಳೂರು–560001 ಫಾರ್ಮಸಿಸ್ಟ್ ಅಪ್ರೆಂಟಿಸ್ಶಿಪ್ ತರಬೇತಿ–ಕರೆ–2 ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ, ಬೆಂಗಳೂರು ಇವರು ಕರ್ನಾಟಕ ರಾಜ್ಯದ ಡಿಪ್ಲೊಮಾ ಕಾಲೇಜುಗಳಿಂದ ಕಳೆದ ಎರಡು ವರ್ಷಗಳಲ್ಲಿ (2024 ಮತ್ತು 2025) ಡಿ. ಫಾರ್ಮ (ಫಾರ್ಮಸಿಯಲ್ಲಿ ಡಿಪ್ಲೊಮಾ) ಪೂರ್ಣಗೊಳಿಸಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ 11 ತಿಂಗಳ ಅವಧಿಗೆ ಅಪ್ರೆಂಟೀಸ್ ಶಿಪ್ ತರಬೇತಿಗಾಗಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಯ್ಕೆ ಪ್ರಕ್ರಿಯೆಯು ಮೆ–ರಿಟ್ ಆಧಾರದ ಮೇಲೆ ನಡೆಯಲಿದೆ. ಮೊದಲನೆ ಸುತ್ತಿನಲ್ಲಿ ರಾಜ್ಯಾದ್ಯಂತ 1000 ಅಪ್ರೆಂಟಿಸ್‌ಗಳಿಗೆ 123 ಅಭ್ಯರ್ಥಿಗಳು ಆಯ್ಕೆಯಾಗಿದ್ದು, ಇನ್ನುಳಿದ ಅಪ್ರೆಂಟಿಸ್‌ಗಳನ್ನು ಎರಡನೇ ಸುತ್ತಿನಲ್ಲಿ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ವಿದ್ಯಾರ್ಥಿಗಳನ್ನು ಕೌನ್ಸಲಿಂಗ್ ಆಧಾರದ ಮೇಲೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ (PHCs) ತರಬೇತಿಗೆ ನಿಯೋಜನೆ ಮಾಡಲಾಗುವುದು. ಅರ್ಜಿಯ ವಿವರಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ (http://kea.kar.nic.in) ಪಡೆಯಬಹುದು ಮತ್ತು ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೋರಲಾಗಿದೆ. : 20.03.2026 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 04.04.2026. ಕನಿಷ್ಠ ಅರ್ಹತೆ: ಕರ್ನಾಟಕದ ಕಾಲೇಜುಗಳಿಂದ ಮಾತ್ರ ಹಿಂದಿನ ಎರಡು (2024 2025) 2. (ಡಿಪ್ಲೊಮಾ) ಉತ್ತೀರ್ಣರಾಗಿರಬೇಕು. ಸರ್ಕಾರಿ ಕೋಟಾದಡಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುತ್ತದೆ. ಕರ್ನಾಟಕ ಸರ್ಕಾರದ ರೋಸ್ಟರ್ ಪದ್ಧತಿಯಂತೆ ಮೀಸಲಾತಿ ನಿಯಮಗಳನ್ನು ಅನುಸರಿಸಲಾಗುತ್ತದೆ. ಅಪ್ರೆಂಟಿಸ್‌ಶಿಪ್ ತರಬೇತಿ ಅವಧಿ ಮತ್ತು ಸ್ಟೈಪೆಂಡ್: 11 ತಿಂಗಳ ಅವಧಿಗೆ, ಪ್ರತಿ ತಿಂಗಳಿಗೆ ರೂ.8,000/– ಸ್ಟೈಪೆಂಡ್ ನೀಡಲಾಗುತ್ತದೆ. ಆನ್‌ಲೈನ್ ಏಇಂ ಅರ್ಜಿ ಶುಲ್ಕಗಳು: ರೂ. 600/–.

# ಅಧಿಕಾರಿಗಳ ಬೇಜವಾಬ್ದಾರಿತನ: ರೈತನ ಹೊಲದಲ್ಲಿ ಅಕ್ರಮ ರಸ್ತೆ ನಿರ್ಮಾಣಕ್ಕೆ ಆಕ್ರೋಶ

ನೈಜ್ಯ ದೆಸೆ ನ್ಯೂಸ್

**ಸಿರವಾರ: ತಾಲೂಕಿನ ಕಲ್ಲೂರು ಹೋಬಳಿ ವ್ಯಾಪ್ತಿಯ ಕಲ್ಲೂರು ದಿಂದ ಶಾಖಪುರ್ ಕಡೆಗೆ ರಸ್ತೆ ನಿರ್ಮಾಣ ಕಾಮಗಾರಿ ನಡೆಯುತ್ತಿರುವ ಸಂದರ್ಭದಲ್ಲಿ ರೈತನ ಜಮೀನಿನಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅಕ್ರಮವಾಗಿ ರಸ್ತೆ ನಿರ್ಮಾಣ ಮಾಡುತ್ತಿರುವುದಕ್ಕೆ ಸಂತ್ರಸ್ತ ರೈತ ಜಾವಿದ್ ನಾಯಕ್ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.**



ನಮ್ಮಿಗೆ ಯಾವುದೇ ಮಾಹಿತಿ ನೀಡದೇ ಏಕಾಏಕಿ ನಮ್ಮ ಭೂಮಿಯಲ್ಲಿ ರಸ್ತೆ ನಿರ್ಮಾಣ ಆರಂಭಿಸಿದ್ದಾರೆ. ಇದು ನ್ಯಾಯವಲ್ಲ," ಎಂದು ಅವರು ಆರೋಪಿಸಿದರು. ಸಿರವಾರ ತಾಲೂಕಿನ ಕಲ್ಲೂರು ಗ್ರಾಮದ ಸರ್ವೆ ನಂಬರ್ 1104ರಲ್ಲಿ ಜಿಲಾನಿ (ತಂದೆ: ಖಾಸಿಂ ನಾಯಕ್) ಅವರಿಗೆ ಸೇರಿದ ಕೃಷಿ ಭೂಮಿಯಲ್ಲಿ ಈ ರಸ್ತೆ ಕಾಮಗಾರಿ ಆರಂಭಗೊಂಡಿದೆ. ಹಳೆಯ ದಾರಿಯನ್ನು ಬಿಟ್ಟು ಹೊಸದಾಗಿ ರೈತನ ಹೊಲದೊಳಗೆ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ ಎಂದು ಆರೋಪಿಸಲಾಗಿದೆ. ಈ ಕುರಿತು ಪ್ರಶ್ನಿಸಿದಾಗ ಅಧಿಕಾರಿಗಳು ಪರಸ್ಪರ ಹೊಣೆ ತಪ್ಪಿಸಿಕೊಂಡು, "ಸರ್ವೆ ಅಧಿಕಾರಿ ಮಹೇಶ್ ಗುರುತು ಮಾಡಿದ ಜಾಗದಲ್ಲಿ ಕೆಲಸ ನಡೆಯುತ್ತಿದೆ" ಎಂದು ಹೇಳಿದರೆ, ಮಹೇಶ್ ಅವರು "ಇದು ಇಂಜಿನಿಯರ್ ನಂದಿನಿ ಅವರಿಗೆ ಸಂಬಂಧಿಸಿದ ವಿಷಯ" ಎಂದು ಉತ್ತರಿಸುತ್ತಿದ್ದಾರೆ ಎಂದು ರೈತ ತಿಳಿಸಿದರು. "ಇದು ಸ್ಪಷ್ಟವಾಗಿ ಕಣ್ಣಾಮುಚ್ಚಾಲೆ ಆಟದಂತಾಗಿದೆ," ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು. ಅಧಿಕಾರಿಗಳ ನಿರ್ಲಕ್ಷ್ಯದಿಂದ ರೈತನ ಕುಟುಂಬ ಆತಂಕಕ್ಕೆ ಒಳಗಾಗಿದ್ದು, "ನನ್ನ ಹೊಲದ ಪಕ್ಕದಲ್ಲೇ ಹಳೆಯ ದಾರಿ ಇದ್ದರೂ ಅದನ್ನು ಬಿಟ್ಟು ನನ್ನ ಭೂಮಿಯಲ್ಲೇ ಹೊಸ ದಾರಿ ನಿರ್ಮಾಣ ಮಾಡುತ್ತಿದ್ದಾರೆ. ಇದು ನೇರ ಅನ್ಯಾಯ," ಎಂದು ಹೇಳಿದರು. ಕರ್ತವ್ಯ ಲೋಪ ಎಸಗಿರುವ ಸರ್ವೆ ಅಧಿಕಾರಿ ಮಹೇಶ್ ಹಾಗೂ ಇಂಜಿನಿಯರ್ ನಂದಿನಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಮತ್ತು ನನಗೆ ನ್ಯಾಯ ಒದಗಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.

# ಸನ್ ರೈಸ್ ಕಾಲೇಜಿನಲ್ಲಿ ಶಹೀದ್ ದಿನ ಆಚರಣೆ







ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸನ್ ರೈಸ್ ಡಿ–ಫಾರ್ಮಸಿ, ನರ್ಸಿಂಗ್, ಪಾರಾ ಮೆಡಿಕಲ್ ಕಾಲೇಜು ಸಿಂಧನೂ–ರಿನಲ್ಲಿ ಇಂದು ಶಹೀದ್ ದಿನಾಚರಣೆಯನ್ನು ಗೌರವಭಾವದಿಂದ ಆಚರಿಸಲಾಯಿತು.**

ಕಾರ್ಯಕ್ರಮದಲ್ಲಿ ದೇಶಕ್ಕಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ಮಹಾನ್ ಸ್ವಾತಂತ್ರ್ಯ ಹೋರಾಟಗಾರರಾದ ಭಗತ್ ಸಿಂಗ್, ಸುಖದೇವ್ ಹಾಗೂ ರಾಜಗುರು ಅವರ ತ್ಯಾಗವನ್ನು ಸ್ಮ–ರಿಸಲಾಯಿತು. ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಮೌನಾಚರಣೆ ನಡೆಸುವ ಮೂಲಕ ಗೌರವ ಸೂಚಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಸಂಸ್ಥೆಯ ಮುಖ್ಯಸ್ಥರು ದೇಶಭಕ್ತಿ, ತ್ಯಾಗ ಮತ್ತು ಧೈರ್ಯವು ಯುವ ಪೀಳಿಗೆಗೆ ಮಾರ್ಗದರ್ಶಕವಾಗಬೇಕು ಎಂದು ಹೇಳಿದರು. ವಿದ್ಯಾರ್ಥಿಗಳು ಶಹೀದರ ಆದರ್ಶಗಳನ್ನು ಅಳವಡಿಸಿಕೊಂಡು, ಉತ್ತಮ ನಾಗರಿಕರಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಎಲ್ಲಾ ವಿಭಾಗದ ಪ್ರಾಂಶುಪಾಲರು, ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿ, ದೇಶಭಕ್ತಿಯ ಘೋಷಣೆಗಳನ್ನು ಕೂಗಿ ಶಹೀದರ ಸ್ಮರಣೆಯನ್ನು ಗಂಭೀರವಾಗಿ ಆಚರಿಸಿದರು, ಈ ಶಹೀದ್ ದಿನಾಚರಣೆ ವಿದ್ಯಾರ್ಥಿಗಳಲ್ಲಿ ದೇಶಭಕ್ತಿ ಮತ್ತು ಜವಾಬ್ದಾ–



# ಎಸ್ಸೆಸ್ಸೆಲ್ಸಿಯ ವಿಜ್ಞಾನ ಪರೀಕ್ಷೆಗೆ 705 ವಿದ್ಯಾರ್ಥಿಗಳು ಗೈರು

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಮಾರ್ಚ್ 23ರ ಸೋಮವಾರ ದಂದು 101 ಪರೀಕ್ಷೆ ಕೇಂದ್ರಗಳಲ್ಲಿ ನಡೆದ ವಿಜ್ಞಾನ ವಿಷಯದಲ್ಲಿ ಒಟ್ಟು 30,813 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 705 ವಿದ್ಯಾರ್ಥಿಗಳು ಗೈರಾಗಿದ್ದಾರೆ.**





ಜಿಲ್ಲೆಯ ದೇವದುರ್ಗ ತಾಲ್ಲೂಕಿನಲ್ಲಿ 4,098 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 89 ವಿದ್ಯಾರ್ಥಿಗಳು ಗೈರಾಗಿದ್ದಾರೆ, ಲಿಂಗಸುಗೂರು ತಾಲ್ಲೂಕಿನಲ್ಲಿ 6,216 ಹಾಜರಾಗಿ 121 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಮಾನ್ವಿ ತಾಲ್ಲೂಕಿನಲ್ಲಿ 5,527 ವಿದ್ಯಾರ್ಥಿಗಳು ಹಾಜರಾಗಿ 177 ವಿದ್ಯಾರ್ಥಿಗಳು ಗೈರಾಗಿದ್ದಾರೆ. ರಾಯಚೂರು ತಾಲ್ಲೂಕಿನಲ್ಲಿ 9,344 ಹಾಜರಾಗಿದ್ದು, 230 ವಿದ್ಯಾರ್ಥಿಗಳು ಗೈರಾಗಿದ್ದಾರೆ ಹಾಗೂ ಸಿಂಧನೂರು ತಾಲ್ಲೂಕಿನಲ್ಲಿ 5,628 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 88 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾರ್ಚ್ 31ರಂದು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ವತಿಯಿಂದ ಈ ವರ್ಷದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಅತ್ಯಂತ ಸಡಗರದಿಂದ ಆಚರಿಸಲು ನಿರ್ಧ–ರಿಸಲಾಗಿದೆ. ಈ ಕುರಿತು ಸಂಘದ ಜಿಲ್ಲಾಧ್ಯಕ್ಷರಾದ ಶ್ರೀ ಕೃಷ್ಣ ಶಾವಂತಗೇರಿ ಅವರು ಭಾನುವಾರ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.**



ಮಾರ್ಚ್ 31ರಂದು ಸಂಜೆ 4:00 ಗಂಟೆಗೆ ನಗರದ ಪ್ರಸಿದ್ಧ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಆಯೋಜಿಸಲಾಗಿದೆ. ಈ ಸಮಾರಂಭದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು, ಹಿರಿಯ ಅಧಿಕಾ–ರಿಗಳು ಹಾಗೂ ವಿವಿಧ ಇಲಾಖೆಗಳ ಮಹಿಳಾ ನೌಕರರು ಪಾಲ್ಗೊಳ್ಳಲಿದ್ದಾರೆ.ಮಹಿಳಾ ದಿನಾಚರಣೆಯ ಮುನ್ನೋಡಿಯಾಗಿ ಮಾರ್ಚ್ 29ರಂದು ಬೆಳಿಗ್ಗೆಯಿಂದ ನಗರದ ಒಳಾಂಗಣ ಕ್ರೀಡಾಂಗಣದಲ್ಲಿ ಮಹಿಳಾ ನೌಕರರಿಗಾಗಿ ವಿವಿಧ ಕ್ರೀಡಾಕೂಟಗಳು ಹಾಗೂ ಸಾಂಸ್ಕೃತಿ–ಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ.ಸರ್ಕಾರಿ ಸೇವೆಯಲ್ಲಿರುವ ಮಹಿಳೆಯರ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಉತ್ತೇಜಿಸುವ ಹಾಗೂ ಅವರಲ್ಲಿರುವ ಸುಪ್ತ ಪ್ರತಿಭೆಯನ್ನು ಹೊರಹಾಕಲು ಈ ಕ್ರೀಡಾಕೂಟವು ಉತ್ತಮ ವೇದಿಕೆಯಾಗಲಿದೆ ಎಂದು ಅಧ್ಯಕ್ಷರು ಆಶಯ ವ್ಯಕ್ತಪಡಿಸಿದರು.

ಸಮಾಜದ ಮತ್ತು ಆಡಳಿತದ ಪ್ರತಿಯೊಂದು ಹಂತದಲ್ಲೂ ಮಹಿಳೆಯರ ಪಾತ್ರ ಅನನ್ಯವಾದುದು. ಕಚೇರಿಯ ಒತ್ತಡದ ನಡುವೆಯೂ ಕುಟುಂಬ ಮತ್ತು ಕರ್ತವ್ಯವನ್ನು ಸಮತೋಲನದಿಂದ ನಿಭಾಯಿಸುವ ಮಹಿಳಾ ನೌಕರರನ್ನು ಗೌರವಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಕಾರ್ಯಕ್ರಮದಲ್ಲಿ ಸಾಧಕ ಮಹಿಳಾ ನೌಕರರಿಗೆ ಸನ್ಮಾನ ಹಾಗೂ ವಿಶೇಷ ಉಪನ್ಯಾಸಗಳನ್ನೂ ಆಯೋಜಿಸುವ ಸಾಧ್ಯತೆ ಇದೆ.ಈ ಸಂದರ್ಭದಲ್ಲಿ ಸಂಘದ ಪ್ರಮುಖರಾದ ಛಾಯಾದೇವಿ, ಜಯಶ್ರೀ, ವಿಜಯಲಕ್ಷ್ಮೀ, ರತ್ನ, ಯಂಕಪ್ಪ, ಸಂತೋಷ, ನೀಲಮ್ಮ ಹಾಗೂ ರಾಜಶೇಖರ ನಾಯಕ ಸೇರಿದಂತೆ ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಬಾಬು ಜಗಜೀವನ ರಾಮ್ ಜಯಂತಿ: ಪೂರ್ವ ಭಾವಿ ಸಭೆ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ಎಪ್ರೀಲ 5 ರಂದು ತಾಲೂಕ ಆಡಳಿತದ ವತಿಯಿಂದ ಆಚರಿಸಲಿರುವ ಹಸಿರು ಕ್ರಾಂತಿಯ ಹ–ರಿಕಾರ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ ರಾಮ್ ಅವರ 119 ನೇ ಜಯಂತಿ ಕುರಿತು ಚರ್ಚಿಸಲು ಮಾರ್ಚ್ 26 ಗುರುವಾರದಂದು ಪೂರ್ವಭಾವಿ ಸಭೆ ಕರೆಯಲಾಗಿದೆ.**



ಅಂದು ಮುಂಜಾನೆ 11:00 ಘಂಟೆಗೆ ತಹಸಿಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡ ಈ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ತಹಶೀಲ್ದಾರ್ ಡಾ.ವಿನಯಾ ಹೂಗಾರ ಅವರು ವಹಿಸುವರು. ಸದರಿ ಸಭೆಯಲ್ಲಿ ಸಮಾಜದ ಪ್ರಮುಖರು, ಪಟ್ಟಣದ ಗಣ್ಯರು ಹಾಗೂ ಅಧಿಕಾರಿಗಳು ಭಾಗವಹಿಸಿ ಸೂಕ್ತ ಸಲಹೆ ಸೂಚನೆಗಳನ್ನು ನೀಡಬೇಕೆಂದು ತಹಸಿಲ್ದಾರ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ರಾಜ್ಯಾದ್ಯಂತ ಹವಾಮಾನ ಬದಲಾವಣೆ–ಮುಂದಿನ ಎರಡು ದಿನಗಳ ಮುನ್ಸೂಚನೆ



ನೈಜ್ಯ ದೆಸೆ ನ್ಯೂಸ್

**ರಾಜ್ಯದಲ್ಲಿ ಬೇಸಿಗೆಯ ಬಿಸಿಲಿನ ನಡುವೆಯೇ ಹವಾಮಾನದಲ್ಲಿ ಏರುಪೇರು ಉಂಟಾಗಿದ್ದು, ಕೆಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುತ್ತಿದ್ದರೆ, ಇನ್ನುಳಿದ ಭಾಗಗಳಲ್ಲಿ ಒಣ ಹವೆ ಮುಂದುವರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜ್ಯದ ಕೆಲವು ಆಯ್ದ ಜಿಲ್ಲೆಗಳಲ್ಲಿ ಮುಂದಿನ 48 ಗಂಟೆಗಳ ಕಾಲ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.**

ಮಳೆಯಾಗುವ ಭಾಗಗಳಲ್ಲಿ ಮೋಡ ಕವಿದ ವಾತಾವರಣವಿರಲಿದ್ದು, ತಾಪಮಾನದಲ್ಲಿ ಅಲ್ಪ ಇಳಿಕೆಯಾಗಬಹುದು. ಬೆಂಗಳೂರು ನಗರ, ಗ್ರಾಮಾಂತರ, ಬಳ್ಳಾರಿ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ರಾಮನಗರ ಸೇರಿದಂತೆ ಮಲೆನಾಡು ಹಾಗೂ ಹಳೆ ಮೈಸೂರು ಭಾಗದ ಜಿಲ್ಲೆಗಳಲ್ಲಿ ಪ್ರಮುಖವಾಗಿ ಒಣ ಹವೆ ಇರಲಿದೆ. ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಗರಿಷ್ಠ ತಾಪಮಾನ ದಾಖಲಾಗಲಿದ್ದು, ಸೆಖೆಯ ವಾತಾವರಣ ಮುಂದುವರಿಯಲಿದೆ. ಬೆಳಗಾವಿ, ಬೀದರ್, ಕಲಬುರಗಿ, ವಿಜಯಪುರ, ಬಾಗಲಕೋಟೆ ಮತ್ತು ರಾಯಚೂರು ಸೇ–ರಿದಂತೆ ಈ ಭಾಗದ ಜಿಲ್ಲೆಗಳಲ್ಲಿ ಬಿಸಿಲಿನ ತೀವ್ರತೆ ಹೆಚ್ಚಿರಲಿದ್ದು, ಒಣ ಹವೆ ಇರಲಿದೆ ಎಂದು ಇಲಾಖೆ ತಿಳಿಸಿದೆ. ಮಳೆ ಬರುವ ಸಾಧ್ಯತೆ ಇರುವ ಜಿಲ್ಲೆಗಳಲ್ಲಿ ಕಟಾವು ಮಾಡಿದ ಬೆಳೆಗಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳಲು ಸೂಚಿಸಲಾಗಿದೆ.

ಗುಡುಗು ಮಿಂಚಿನ ಸಂದರ್ಭದಲ್ಲಿ ಮರದ ಕೆಳಗೆ ಅಥವಾ ಬಯಲು ಪ್ರದೇಶದಲ್ಲಿ ಆಶ್ರಯ ಪಡೆಯಬಾರದು. ಒಣ ಹವೆ ಇರುವ ಜಿಲ್ಲೆಗಳಲ್ಲಿ ಮಧ್ಯಾಹ್ನದ ವೇಳೆ ತಾಪಮಾನವು ವಾಡಿಕೆಗಿಂತ 2–3 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗುವ ಸಾಧ್ಯತೆಯಿದೆ. ಹೀಗಾಗಿ ಸಾರ್ವಜನಿಕರು ನಿರ್ಜಲೀಕರಣ (Dehydration) ತಡೆಯಲು ಹೆಚ್ಚಿನ ಪ್ರಮಾಣದಲ್ಲಿ ನೀರು ಸೇವಿಸುವುದು ಉತ್ತಮ. ಸಪ್ಪೆ ಅಥವಾ ಮೋಡ ಕವಿದ ವಾತಾವರಣವಿರುವ ಕಡೆಗಳಲ್ಲಿ ಉಸಿರಾಟದ ತೊಂದರೆ ಅಥವಾ ಅಲರ್ಜಿ ಇರುವವರು ಜಾಗರೂಕರಾಗಿರಬೇಕು. ಹಠಾತ್ ಹವಾಮಾನ ಬದಲಾವಣೆಯು ಶೀತ ಮತ್ತು ಜ್ವರಕ್ಕೆ ಕಾರಣವಾಗಬಹುದು. ಸಮುದ್ರ ಮಟ್ಟದಲ್ಲಿನ ಗಾಳಿಯ ಒತ್ತಡದ ಬದಲಾವಣೆಯಿಂದಾಗಿ ಈ ಹವಾಮಾನ ವೈಪರೀತ್ಯ ಉಂಟಾಗುತ್ತಿದ್ದು, ನಾಗರಿಕರು ಅಧಿಕೃತ ಹವಾಮಾನ ವರದಿಗಳನ್ನು ಗಮನಿಸುತ್ತಿರಲು ವಿನಂತಿಸಲಾಗಿದೆ.

# ಭಗತ್ ಸಿಂಗ್, ಸುಖದೇವ್, ರಾಜಗುರು ಅವರ ಹುತಾತ್ಮ ದಿನಾಚರಣೆ :ಸರ್ಕಾರಿ ಶಾಲೆ ಉಳಿಸಲು ಹೋರಾಟಕ್ಕೆ ಕರೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ನಗರದ ಭಗತ್ ಸಿಂಗ್ ಸರ್ಕಲ್ ನಲ್ಲಿ ಎಐಡಿಎಸ್‌ಓ, ಎಐಡಿವೈಓ, ಎಐಎಂಎಸ್‌ಎಸ್ ಸಂಘಟನೆಗಳಿಂದ ನಮ್ಮ ದೇಶದ ಸ್ವಾತಂತ್ರ್ಯ ಸಂಗ್ರಾಮದ ಮಹಾನ್ ಕ್ರಾಂತಿಕಾರಿಗಳಾದ ಭಗತ್ ಸಿಂಗ್, ಸುಖದೇವ್, ರಾಜಗುರು ಅವರ ಹುತಾತ್ಮ ದಿನವನ್ನು ಆಚರಿಸಲಾಯಿತು.**

ಸಾಹಿತಿ ಬಶೀರ್ ಅಹ್ಮದ್ ಹೊಸಮನಿ, ಎಐಯುಟಿಯುಸಿ ಜಿಲ್ಲಾ ಕಾರ್ಯದರ್ಶಿ ಮಹೇಶ ಚಿಕ್ಕಲಪರವಿ, ಎಐಎಂಎಸ್‌ಎಸ್ ಜಿಲ್ಲಾ ಸಂಘಟನಾಕಾರರಾದ ಸರೋಜ ಗೊನವಾರ ಅವರು ಕ್ರಾಂತಿಕಾ–ರಿಗಳ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಸಭೆಯನ್ನು ಉದ್ದೇಶೀಸಿ ಕೃಷಿ ವಿವಿ ಸಂಶೋಧನಾ ವಿದ್ಯಾರ್ಥಿ ಹಾಗೂ ಎ ಐ ಡಿ ವೈ ಓ ಸದಸ್ಯರಾದ ಶಿವಪ್ಪ ಅಸ್ಕಿಹಾಳ್ ಅವರು ಮಾತನಾಡಿ, ಭಗತ್ ಸಿಂಗ್ ಅವರು ಪುಸ್ತಕ ಪ್ರೇಮಿಯಾಗಿದ್ದರು. ಅತಿ ಕಡಿಮೆ ವಯಸ್ಸಿನಲ್ಲಿ ಬಹಳಷ್ಟು ಪುಸ್ತಕವನ್ನು ಓದಿದ್ದರು. ಭಾರತದಲ್ಲಿ ಕ್ರಾಂತಿಯಾಗಬೇಕೆಂದರೆ ಗನ್ನಿನ ಜೊತೆ ಪೆನ್ನಿನ ಅವಶ್ಯಕತೆ ಇದೆ ಎಂದು ಅರಿತಿದ್ದರು. ಭಗತ್ ಸಿಂಗ್ ಮೇಲೆ ಜಲಿಯನ್ ವಾಲಾಬಾಗ್ ಘಟನೆ ಅತ್ಯಂತ ಗಾಢವಾದ ಪರಿಣಾಮವನ್ನು ಬೀರಿತ್ತು.

ಹಾಗಾಗಿ ಅತ್ಯಂತ ಚಿಕ್ಕ ವಯಸ್ಸಿನಲ್ಲಿ ಬ್ರಿಟಿಷರ ದಬ್ಬಾಳಿಕೆ ವಿರುದ್ಧ ಹೋರಾಡುವ ಸಂಕಲ್ಪನವರು ತೊಟ್ಟಿದ್ದರು. ಭಗತ್ ಸಿಂಗ್ ಅವರ ನೇತೃತ್ವದ ಕ್ರಾಂತಿ–ಕಾರಿಗಳ ಗುಂಪು ಜಾತಿ ಪದ್ಧತಿ, ಕೋಮುವಾದದಂತ ಸಾಮಾಜಿ–ಕ ಪಿಡುಗುಗಳ ವಿರುದ್ಧ ರಾಜಿ–ರಹಿತವಾಗಿ ಹೋರಾಟ ನಡೆಸಿದರು. ಭಗತ್ ಸಿಂಗ್ ಮತ್ತು ಸಂಗಡಿಗರು




ಅವರ ಗುರುಗಳಾದ ವಿದ್ಯಾಲಂಕಾರ ಅವರ ಮಾರ್ಗದರ್ಶನದಂತೆ ಹೆಚ್.ಎಸ್. ಆರ್. ಎ (ಹಿಂದೂಸ್ತಾನ್ ಸೋಶಿಯಲಿಸ್ಟ್ ರಿಪಬ್ಲಿಕ್ ಅಸೋಸಿಯೇಷನ್) ಎಂಬ ಕ್ರಾಂತಿಕಾರಿ ಸಂಘಟನೆಯಲ್ಲಿ ಸಕ್ರಿಯವಾಗಿದ್ದರು" ಎಂದರು.

ತದ ನಂತರ ಸಭೆಯ ಉದ್ದೇಶಿಸಿ ಎಐಡಿವೈಓ ಜಿಲ್ಲಾ ಅಧ್ಯಕ್ಷರಾದ ಚನ್ನಬಸವ ಜಾನೇಕಲ್ ಭಗತ್ ಸಿಂಗ್ ಅವರು ಯಾವತ್ತೂ ಜೀವನದಲ್ಲಿ ರಾಜಿ ಮಾಡಿಕೊಳ್ಳಲಿಲ್ಲ. ನಂಬಿದ ತತ್ವಕ್ಕಾಗಿ ಜೀವವನ್ನೇ ಕೊಟ್ಟರು. ಬ್ರಿಟಿಷರ ವಿರುದ್ಧ ರಾಜಿ ಮಾಡಿಕೊಳ್ಳದೆ ನಗುನಗುತ್ತಾ ಗಲ್ಲಿಗೆ ಹೋದರು. ಬ್ರಿಟಿಷರನ್ನು ಭಾರತದಿಂದ ಓಡಿಸುವುದು ಮಾತ್ರ ಅವರ ಗುರಿಯಾಗಿರಲಿಲ್ಲ. ಅವರ ಗುರಿ ಲೆನಿನ್ ನೇತೃತ್ವದಲ್ಲಿ ರಷ್ಯಾದಲ್ಲಿ ನಡೆದ ಸಮಾಜವಾದಿ ಕ್ರಾಂತಿಯಂತೆ ಭಾರತದಲ್ಲಿ ಕೂಡ ಸಮಾಜವಾದಿ ಕ್ರಾಂತಿ ನೆರವೇ–ರಿಸಲು ಪಣತೊಟ್ಟಿದ್ದರು. ಅದಕ್ಕಾಗಿ ತಮ್ಮ ಜೀವನ ಬಲಿದಾನ ಮಾಡಿದರು. ಹೇಡಿ ಬ್ರಿಟಿಷರು ಅವರನ್ನು ಗಲ್ಲಿಗೆ ಹಾಕಿದರು. ಆಗ ಭಗತ್ ಸಿಂಗ್ "ನನ್ನನ್ನು ಗಲ್ಲಿಗೆ ಹಾಕಬಹುದು ನನ್ನ ವಿಚಾರಗಳು ನಾಶ ಮಾಡಲು ಸಾಧ್ಯವಿಲ್ಲ" ಎಂದು ಹೇಳಿದ್ದರು.

ಅದರಂತೆ ನಮ್ಮ ಸಂಘಟನೆಗಳು ಇಂದು ಅವರ ಕನಸಿನ ಭಾರತ ನಿರ್ಮಾಣ ಮಾಡಲು ಶ್ರಮಿಸುತ್ತಿವೆ ಎಂದರು. ಇಂದು ದೇಶವು ಆರ್ಥಿಕವಾಗಿ ಮತ್ತು ಸಾಂಸ್ಕೃತಿಕವಾಗಿ ಬಿಕ್ಕಟ್ಟಿನಲ್ಲಿದೆ. ಒಂದು ಕಡೆ ಶಿಕ್ಷಣ ಸಂಪೂರ್ಣವಾಗಿ ಖಾಸಗಿಕರಣವಾಗುತ್ತಿದ್ದು, ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ 40,000 ಕ್ಕು ಹೆಚ್ಚು ಸರ್ಕಾರಿ ಶಾಲೆಗಳನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಮುಚ್ಚಲು ಹೊರಟಿದೆ. ಇನ್ನು ಮಹಿಳೆಯರ ಮೇಲಿನ ದೌರ್ಜನ್ಯ ಮತ್ತು ಅತ್ಯಾಚಾರ ದಿನೇ ದಿನೇ ಜಾಸ್ತಿಯಾಗುತ್ತಿದೆ. ಕಷ್ಟಪಟ್ಟು ದುಡಿಯುವ ರೈತರ ಬೆಳೆಗೆ ಬೆಲೆ ಇಲ್ಲದೆ ಲಕ್ಷಾಂತರ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಈ ಎಲ್ಲಾ ಸಮಸ್ಯೆಗಳ ವಿರುದ್ಧ ದೇಶದ ವಿದ್ಯಾರ್ಥಿ ಯುವಜನ ಮಹಿಳೆಯರು ಒಗ್ಗಟ್ಟಿನಿಂದ ಭಗತ್ ಸಿಂಗ್ ಕಂಡ ಶೋಷಣೆ ರಹಿತ ಸಮಸಮಾಜ ನಿರ್ಮಾಣ ಮಾಡುವುದು ನಮ್ಮೆಲ್ಲರ ಮೇಲೆ ಜವಾಬ್ದಾರಿಯಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಐಡಿ–ಎಸ್‌ಓ ಜಿಲ್ಲಾ ಕಾರ್ಯದರ್ಶಿ ಬಸವರಾಜ್ ವಹಿಸಿದ್ದರು,ಎಐಡಿವೈಓ ಜಿಲ್ಲಾ ಕಾರ್ಯದರ್ಶಿ ವಿನೋದ್ ಕುಮಾರ್ ಹಾಗೂ ಕಾರ್ಮಿಕ ಮುಖಂಡರಾದ ಮಹೇಶ್ ಚಿಕಲಪರ್ವಿ ಮತ್ತು ನಂದ ಗೋಪಾಲ್, ಅಂಬಿಕಾ,ಮೌನೇಶ್, ಶಿವು ಕುಮಾರ್, ಬಸವರಾಜ್ ದೇಸಾಯಿ

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಜಲ ತಂತ್ರಜ್ಞಾನ ಮತ್ತು ಆರೋಗ್ಯ ವಿಜ್ಞಾನ ಕೋರ್ಸ್

ಜಲ ತಂತ್ರಜ್ಞಾನ (Water Technology) ಮತ್ತು ಆರೋಗ್ಯ ವಿಜ್ಞಾನ (Health Science) ಕೋರ್ಸ್‌ಗಳು ಶುದ್ಧ ನೀರು, ಪರಿಸರ ಸಂರಕ್ಷಣೆ ಮತ್ತು ಮಾನವನ ಆರೋಗ್ಯದ ಮೇಲೆ ಕೇಂದ್ರೀಕರಿಸುತ್ತವೆ. ಈ ಕ್ಷೇತ್ರಗಳು ನೀರು ಸಂಸ್ಕರಣೆ, ಮಾಲಿನ್ಯ ನಿಯಂತ್ರಣ ಮತ್ತು ತಡೆಗಟ್ಟುವ ಆರೋಗ್ಯ ಸೇವೆಗಳಲ್ಲಿ ಉದ್ಯೋಗಾವಕಾಶಗಳನ್ನು ಒದಗಿಸುತ್ತವೆ. ಪದವಿ ಮತ್ತು ಸ್ನಾತಕೋತ್ತರ ಹಂತಗಳಲ್ಲಿ ಪರಿಸರ ವಿಜ್ಞಾನ, ಜಲ ಸಂಪನ್ಮೂಲ ನಿರ್ವಹಣೆ, ಮತ್ತು ಸಾರ್ವಜನಿಕ ಆರೋಗ್ಯ ವಿಭಾಗಗಳಲ್ಲಿ ಇವು ಲಭ್ಯವಿವೆ. ಕೋರ್ಸ್ ವಿವರಗಳು: ಅರ್ಹತೆ: ವಿಜ್ಞಾನ ವಿಭಾಗದಲ್ಲಿ ಪಿಯುಸಿ (ಪದವಿಗೆ), ಸಂಬಂಧಿತ ವಿಜ್ಞಾನ ವಿಷಯಗಳಲ್ಲಿ ಪದವಿ (ಸ್ನಾತಕೋತ್ತರ ಪದವಿಗೆ). ಪ್ರಮುಖ ವಿಷಯಗಳು: ಜಲ ಸಂಸ್ಕರಣಾ ತಂತ್ರಜ್ಞಾನ (Water Treatment Technologies), ಪರಿಸರ ಎಂಜಿನಿಯರಿಂಗ್, ಸೂಕ್ಷ್ಮಜೀವಿ ವಿಜ್ಞಾನ (Microbiology), ಮತ್ತು ಸಾರ್ವಜನಿಕ ಆರೋಗ್ಯ. ಅವಕಾಶಗಳು: ಜಲ ಸಂಸ್ಕರಣಾ ಘಟಕಗಳು, ಪರಿಸರ ಸಲಹಾ ಸಂಸ್ಥೆಗಳು, ಆರೋಗ್ಯ ಇಲಾಖೆ, ಮತ್ತು ಸಂಶೋಧನಾ ಸಂಸ್ಥೆಗಳಲ್ಲಿ ಉದ್ಯೋಗ. ಅಗತ್ಯವಿರುವ ಕೌಶಲ್ಯಗಳು: ನೀರಿನ ಗುಣಮಟ್ಟದ ಪರೀಕ್ಷೆ (Water Quality Testing). ಹೊಸ ಜಲ ಸಂಸ್ಕರಣಾ ತಂತ್ರಜ್ಞಾನಗಳ ಜ್ಞಾನ (ಉದಾ: GC-FID technology). ಪರಿಸರ ಎಂಜಿನಿಯರಿಂಗ್ ಜ್ಞಾನ.

1ನೇ ಪುಟದಿಂದ....

ಇನ್ನೆರಡು ಹೊಸ ತೈಲ ಸಂಗ್ರಹಣೆ ಕೇಂದ್ರಗಳನ್ನು ಸ್ಥಾಪಿಸಲು ಅನುಮೋದನೆ ನೀಡಿದೆ. ಪಾದೂರಿನ ಕಾಮಗಾರಿ 2025ರ ಅ.1ರಂದು ಆರಂಭವಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಇದಲ್ಲದೆ, ಮೊದಲ ಹಂತದ ಸಂಗ್ರಹಣೆಯನ್ನು ವಾಣಿಜ್ಯೀಕರಣಗೊಳಿಸುವ ಯೋಜನೆಯಡಿ ಯುಎಇಯ ಮತ್ತು ನಡುವೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಮಂಗಳೂರು ಸಂಗ್ರಹಣೆಯ 7.5 ಲಕ್ಷ ಟನ್ ಸಾಮರ್ಥ್ಯದ ಒಂದು ಟ್ಯಾಂಕ್ ಬಳಸಲು ಅವಕಾಶ ನೀಡಲಾಗಿದೆ. ದೇಶದ ಒಟ್ಟು ಕಚ್ಚಾ ತೈಲ ಮತ್ತು ಪೆಟ್ರೋಲಿಯಂ ಉತ್ಪನ್ನಗಳ ಸಂಗ್ರಹಣಾ ಸಾಮರ್ಥ್ಯ ಈಗ ಸುಮಾರು 74 ದಿನಗಳ ಮಟ್ಟದಲ್ಲಿದೆ ಎಂದು ಸಚಿವರು ತಿಳಿಸಿದ್ದಾರೆ. ಸಂಗ್ರಹಣೆ ಪ್ರಮಾಣವು ಬಳಕೆ ಮತ್ತು ಸಂಗ್ರಹದ ಮೇಲೆ ಅವಲಂಬಿತವಾಗಿದ್ದು, ಅದು ಸ್ಥಿರವಾಗಿರುವುದಿಲ್ಲ ಎಂದು ಅವರು ಹೇಳಿದ್ದಾರೆ.ಭಾರತವು ಕಚ್ಚಾ ತೈಲವನ್ನು ವಿವಿಧ ದೇಶಗಳಿಂದ ಆಮದು ಮಾಡಿಕೊಳ್ಳುತ್ತಿದ್ದು, ಅಮೆರಿಕಾ, ನೈಜೀರಿಯಾ, ಅಂಗೋಲಾ, ಕೆನಡಾ, ಕೊಲಂಬಿಯಾ, ಬ್ರೆಜಿಲ್ ಮತ್ತು ಮೆಕ್ಸಿಕೋ ಸೇರಿದಂತೆ ಒಟ್ಟು 41 ದೇಶಗಳಿಂದ ತೈಲವನ್ನು ಖರೀದಿಸುತ್ತಿದೆ. ದೇಶಗಳಾದ ಇರಾಕ್, ಸೌದಿ ಅರೇಬಿಯಾ, ಯುಎಇ, ಕುವೈತ್ ಮತ್ತು ಕತಾರ್ ದೇಶಗಳು ಪರಂಪರ ಪೂರೈಕೆದಾರರಾಗಿವೆ ಎಂದು ಅವರು ಸೇರಿಸಿದರು.

## ಮಾರ್ಚ್ 26ರಂದು ಹರಾಜು ಪ್ರಕ್ರಿಯೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಗ್ರಂಥಾಲಯದಲ್ಲಿನ ಹಳೆಯ ದಿನ ಪತ್ರಿಕೆಗಳು, ನಿಯತ ಕಾಲಿಕೆಗಳು ಹಾಗೂ ಪಠ್ಯಕ್ರಮಕ್ಕೆ ಇಲ್ಲದ ಪುಸ್ತಕಗಳನ್ನು ಹರಾಜು ಮೂಲಕ ವಿಲೇವಾರಿ ಮಾಡಲು ಮಾರ್ಚ್ 26ರ ಮಧ್ಯಾಹ್ನ 3 ಗಂಟೆಗೆ ಕಾಲೇಜಿನ ಗ್ರಂಥಾಲಯದಲ್ಲಿ ಹರಾಜು ಮೂಲಕ ಮಾರಾಟ ಮಾಡಲಾಗುತ್ತಿದ್ದು, ಆಸಕ್ತರು 1000ರೂ. ಮುಂಗಡ ಠೇವಣಿಯನ್ನರಿಸಿ, ಹರಾಜಿನಲ್ಲಿ ಭಾಗವಹಿಸಬಹುದಾಗಿದೆ.**



ಹರಾಜಿನ ಮುನ್ನವೇ ಹಳೆಯ ಪುಸ್ತಕಗಳನ್ನು ಪರಿಶೀಲಿಸಿ, ಹರಾಜಿನಲ್ಲಿ ಪಾಲ್ಗೊಳ್ಳಬೇಕು. ಹರಾಜಿನಲ್ಲಿ ಯಶಸ್ವಿಯಾಗದವರುಗಳ ಮುಂಗಡ ಠೇವಣಿ ಮೊತ್ತವನ್ನು ಮಾರ್ಚ್ 26 ರಂದು ಹರಾಜು ಮುಕ್ತಾಯಗೊಂಡ ನಂತರ ಹಿಂತಿರುಗಿಸಲಾಗುವುದೆಂದು ಕಾಲೇಜಿನ ಪಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಬ.ನಾ ರವಿ ನೇತೃತ್ವದಲ್ಲಿ ಯುಗಾದಿ ಹಾಗೂ ರಂಜಾನ್ ಪ್ರಯುಕ್ತ ರೇಷನ್ ಕಿಟ್ ವಿತರಣೆ.

ನೈಜ್ಯ ದೆಸೆ ನ್ಯೂಸ್




**ಪೀಣ್ಯ ದಾಸರಹಳ್ಳಿ: ಕಾಂಗ್ರೆಸ್ ಮುಖಂಡರು, ವಿದ್ಯಾಭೂಷಣ್ ಇಂಟರ್ ನ್ಯಾಷನಲ್ ಸ್ಕೂಲ್ ಸಂಸ್ಥಾಪಕರಾದ ಬ.ನಾ.ರವಿ ಹಾಗೂ ಹೆಗ್ಗನಹಳ್ಳಿಯ ಕಾಂಗ್ರೆಸ್ ಪಕ್ಷದ ಜಿಬಿಎ ಅಕಾಂಕ್ಷಿ ಶ್ರೀಮತಿ ಪಾರ್ವತಿ ಬ.ನಾ.ರವಿ ದಂಪತಿಗಳು ಯುಗಾದಿ ಹಾಗೂ ರಂಜಾನ್ ಪ್ರಯುಕ್ತ ಹಮ್ಮಿಕೊಂಡಿದ್ದ ರೇಷನ್ ಕಿಟ್ ವಿತರಣೆಗೆ ಕುಣಿಗಲ್ ಶಾಸಕ ಡಾ. ರಂಗನಾಥ್ ಹಾಗೂ ಅರೇಶಂಕರ ಮಠದ ಸದ್ಗುರು ಶ್ರೀ ಸಿದ್ದರಾಮ ಚೈತನ್ಯ ಮಹಾಸ್ವಾಮೀಜಿಗಳು ಅಮೃತಹಸ್ತದಿಂದ ನೆರವೇರಿಸಿದರು.**

'ಕಾಂಗ್ರೆಸ್ ಪಕ್ಷ ಮೊದಲಿನಿಂದಲೂ ಬಡವರ ದೀನ ದಲಿತರ ಪಕ್ಷ ಜನಗಳ ನೆರವಿಗೆ ಸದಾ ಸಿದ್ದವಿರುತ್ತದೆ. ಈ ಹಿನ್ನೆಲೆಯಲ್ಲಿ ಪಕ್ಷದ ಮುಖಂಡರ ಸಲಹೆ ಸಹಕಾರದೊಂದಿಗೆ ವಾರ್ಡ್ ನ ನೂರಾರು ಕುಟುಂಬಗಳಿಗೆ ಉಚಿತ ರೇಷನ್ ಪದಾರ್ಥಗಳ ಕಿಟ್ ಗಳನ್ನು ವಾರ್ಡ್ ಗಳಲ್ಲಿ ವಿತರಣೆ ಮಾಡಿದ್ದೇವೆ. ಮುಂದಿನ ದಿನಗಳಲ್ಲಿ ಜನರ ಪರ ಕೆಲಸಗಳಲ್ಲಿ ಅವರ ಕಷ್ಟ ಸುಖಗಳಲ್ಲಿ ಭಾಗವಹಿಸಿ ಪಕ್ಷವನ್ನು ಸಂಘಟಿಸುವ ಕೆಲಸದಲ್ಲಿ ತೊಡಗಿಕೊಂಡಿರುವೆ. ಮುಂದಿನ ಜಿಬಿಎ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದು ಎಲ್ಲರ ಸಹಕಾರದಿಂದ ಮತ್ತಷ್ಟು ಜನಸೇವೆಗೆ ಮುಂದಾಗುವೆ', ಎಂದು ಕಾಂಗ್ರೆಸ್ ಮುಖಂಡರಾದ ಬ.ನಾ ರವಿ ತಿಳಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಕಾರ್ಮಿಕ ವಿಭಾಗದ ಅಧ್ಯಕ್ಷರು ಹಾಗೂ ಬಿಡಿಎ ಸದಸ್ಯರಾದ ಪುಟ್ಟಸ್ವಾಮಿಗೌಡ, ರಾಜಗೋಪಾಲನಗರ ವಾರ್ಡ್ ಕಾಂಗ್ರೆಸ್ ಅಧ್ಯಕ್ಷ ಬಿ ಜಗದೀಶ್ ಕುಮಾರ್, ಕೆಪಿಸಿಸಿ ಕಾರ್ಮಿಕ ವಿಭಾಗದ ಪ್ರಧಾನ ಕಾರ್ಯದರ್ಶಿ ಮೋಹನ್ ಕುಮಾರ್, ಡಾ. ಬಿ.ಆರ್ ಅಂಬೇಡ್ಕರ್ ಅಭಿಮಾನಿಗಳ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷರು ಹಾಗೂ ಕಾಂಗ್ರೆಸ್ ಮುಖಂಡರಾದ ಉಮೇಶ್ ರಾವಣ್, ಕೆಪಿಸಿಸಿ ಕಾರ್ಮಿಕ ಘಟಕದ ರಾಜ್ಯ ಜಂಟಿ ಕಾರ್ಯದರ್ಶಿ ನಿಸಾರ್ ಖಾನ್, ಹೆಗ್ಗನಹಳ್ಳಿ ಬ್ಲಾಕ್ ಯೂಥ್ ಕಾಂಗ್ರೆಸ್ ಉಪಾಧ್ಯಕ್ಷ ಗಿಡ್ಡೇನಹಳ್ಳಿ ಶಶಿಕುಮಾರ್, ಮುಖಂಡರಾದ ತಾಸೀನ ಭಾನು, ಶಿಲ್ಪಾ ರಾಣಿ, ಸಲ್ಮಾ ಮತ್ತಿತರರು ಇದ್ದರು.

# ಕೆ.ಸಿ, ಹೆಚ್.ಎನ್ ಮತ್ತು ವೃಷಭಾವತಿ ವ್ಯಾಲಿಗಳ ನೀರು ಸಂಪೂರ್ಣ ಸುರಕ್ಷಿತ

ನೈಜ್ಯ ದೆಸೆ ನ್ಯೂಸ್



**ಬೆಂಗಳೂರು: ಸಂಸ್ಕರಿಸಿದ ನೀರಿನಿಂದ ಬೆಂಗಳೂರು ಸುತ್ತಮುತ್ತಲಿನ ಬರ ಪೀಡಿತ ಜಿಲ್ಲೆಗಳ ಅಂತರ್ಜಲ ಅಭಿವೃದ್ಧಿಪಡಿಸುವ ಉದ್ದೇಶದಿಂದ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರ ನೇತೃತ್ವದಲ್ಲಿ ನಮ್ಮ ಕಾಂಗ್ರೆಸ್ ಸರ್ಕಾರ ಜಾರಿ ಗೊಳಿಸಿರುವ ಕೆ.ಸಿ ವ್ಯಾಲಿ, ಹೆಚ್.ಎನ್ ವ್ಯಾಲಿ ಮತ್ತು ವೃಷಭಾವತಿ ವ್ಯಾಲಿಗಳ ನೀರಿನ ಗುಣಮಟ್ಟದ ಕುರಿತು ಇಂದು, ನನ್ನ ಅಧ್ಯಕ್ಷತೆಯಲ್ಲಿ ವಿಧಾನಸೌಧದ ಕಚೇರಿಯಲ್ಲಿ,**

ಮಾನ್ಯ ಕಂದಾಯ ಸಚಿವರಾದ ಶ್ರೀ ಕೃಷ್ಣ ಬೈರೇಗೌಡ, ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಸ್ತುವಾರಿ ಸಚಿವರಾದ ಶ್ರೀ ಕೆ.ಎಚ್. ಮುನಿಯಪ್ಪ, ಮಾನ್ಯ ಉನ್ನತ ಶಿಕ್ಷಣ ಸಚಿವರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎಂ.ಸಿ. ಸುಧಾಕರ್ ಅವರ ಸಮಕ್ಷಮದಲ್ಲಿ, ಭಾರತೀಯ ವಿಜ್ಞಾನ ಸಂಸ್ಥೆಯ ವಿಜ್ಞಾನಿಗಳು, ಜಲಮಂಡಳಿ ಅಧಿಕಾರಿಗಳೊಂದಿಗೆ ಸಂಸ್ಕರಿಸಿದ ನೀರಿನ ಗುಣಮಟ್ಟದ ಕುರಿತು ವಿಸ್ತೃತ ಚರ್ಚೆ ನಡೆಸಿದ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಪರಿಷತ್ತಿನ ಸಭಾ ನಾಯಕರಾದ ಶ್ರೀ ಎನ್ ಎಸ್ ಬೋಸರಾಜು ಜೀ ಅವರು.

ಸಭೆಯ ಮುಖ್ಯಾಂಶಗಳು ಕೆಸಿ ವ್ಯಾಲಿ, ಹೆಚ್‌ಎನ್ ವ್ಯಾಲಿ ಮತ್ತು ವೃಷಭಾವತಿ ವ್ಯಾಲಿಗಳ ಸಂಸ್ಕರಿಸಿದ ನೀರು ಅತ್ಯುತ್ತಮ ಗುಣಮಟ್ಟದ್ದಾಗಿದೆ ಎಂಬುದು ಭಾರತೀಯ ವಿಜ್ಞಾನ ಸಂಸ್ಥೆಯ ವಿಜ್ಞಾನಿಗಳ ಸುದೀರ್ಘ ಸಂಶೋಧನೆಗಳಿಂದ ದೃಢಪಟ್ಟಿದೆ. ಹೀಗಾಗಿ, ಈ ಬಗ್ಗೆ ಸಾರ್ವಜನಿಕರು ಯಾವುದೇ ರೀತಿಯ ಆತಂಕ ಪಡುವ ಅಗತ್ಯವಿಲ್ಲ. ಈ ಯೋಜನೆಗಳಿಂದ ಕೋಲಾರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ತುಮಕೂರು ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಗಣನೀಯವಾಗಿ ವೃದ್ಧಿಸಿದೆ. ಹಿಂದೆ 1,500 ರಿಂದ 1,800 ಅಡಿಗಳವರೆಗೂ ಕುಸಿದಿದ್ದ ಅಂತರ್ಜಲ, ಈ ಯೋಜನೆಗಳ ಪರಿಣಾಮದಿಂದ . 200 ರಿಂದ 300 ಅಡಿಗೆ ಲಭ್ಯವಾಗುತ್ತಿದೆ.

ಸಂಸ್ಕರಿಸಿದ ನೀರಿನಿಂದ ಹೆಚ್ಚಾಗಿರುವ ಅಂತರ್ಜಲವು ಒಟ್ಟಾರೆ ಐದು ಹಂತಗಳಲ್ಲಿ ಶುದ್ಧೀಕರಣಗೊಳ್ಳುತ್ತಿರುವುದರಿಂದ ನೀರಿನ ಗುಣಮಟ್ಟ ಹೆಚ್ಚಿದೆ. ಬಹಳ ಮುಖ್ಯವಾಗಿ ಈ ನೀರನ್ನು ಬಳಕೆ ಮಾಡುತ್ತಿರುವ ಜನ ಹಾಗೂ ಜಾನುವಾರುಗಳ ಆರೋಗ್ಯದಲ್ಲಿ ಯಾವುದೇ ಏರುಪೇರು ಕಂಡುಬಂದಿಲ್ಲ. ಕೃಷಿ ಬೆಳೆಗಳ ಮೇಲೂ ಪ್ರತಿಕೂಲ ಪರಿಣಾಮ ಬೀರಿಲ್ಲ ಎಂದು ವರದಿ ದೃಢಪಡಿಸಿದೆ. ಸಂಸ್ಕರಿತ ತ್ಯಾಜ್ಯ ನೀರಿನಿಂದ ಹೆಚ್ಚಾಗಿರುವ ಅಂತರ್ಜಲ ಬಳಕೆಯಿಂದಾಗಿ ಮಣ್ಣಿನ ಗುಣಮಟ್ಟವೂ ಸುಧಾರಿಸಿದ್ದು, ಮೆಂತ್ಯ, ಸೌತೆಕಾಯಿ, ಬೀಟ್ರೂಟ್, ಟೊಮೆಟೊ ಸೇರಿದಂತೆ ಇತರೆ ತರಕಾರಿ ಬೆಳೆಗಳನ್ನು ಈ ಭಾಗದ ರೈತರು ಯಶಸ್ವಿಯಾಗಿ ಬೆಳೆಯುತ್ತಿದ್ದಾರೆ. ಇಷ್ಟಾದರೂ, ಮಣ್ಣಿನಲ್ಲಿ ನೈಟ್ರೋಜನ್ ಅಂಶ ಹೆಚ್ಚಿದೆ ಎಂಬ ಆರೋಪಗಳು ಶುದ್ದ ಸುಳ್ಳು ಎಂದು ವಿಜ್ಞಾನಿಗಳು ಸಭೆಯಲ್ಲಿ ವಿವರಿಸಿದರು.

ವತಿಯಿಂದ 2019 ರಿಂದ ಸತತ ಆರು ವರ್ಷಗಳ ಕಾಲ ನಡೆಸಲಾದ ಸಂಶೋಧನೆಯಲ್ಲಿ, ನೀರಿನಲ್ಲಿ ಹಾಗೂ ಅಂತರ್ಜಲದಲ್ಲಿ ಯಾವುದೇ ಹಾನಿಕಾರಕ ಲೋಹಂಶಗಳು ಪತ್ತೆಯಾಗಿಲ್ಲ. ವಾಸನೆ ಮತ್ತು ಬಣ್ಣವಿಲ್ಲದ ಶುದ್ಧ ನೀರು ಲಭ್ಯವಾಗುತ್ತಿದೆ. ಜಾನುವಾರುಗಳ ಹಾಲು ಉತ್ಪಾದನೆಯೂ ಹೆಚ್ಚಿದೆ. ಈ ಯೋಜನೆಯನ್ನು ಇಡೀ ದೇಶವೇ ಅನುಸರಿಸಬೇಕು. ಮೀನಿನ ಆರೋಗ್ಯ ಹಾಗೂ ಮಾಂಸದ ಗುಣಮಟ್ಟವನ್ನು ಆರು ತಿಂಗಳಿಗೊಮ್ಮೆ ಪರಿಶೀಲಿಸಲು ಹಾಗೂ ಸಂಶೋಧನೆಯನ್ನು ಮುಂದಿನ ಹತ್ತು ವರ್ಷಗಳವರೆಗೆ ಮುಂದುವರಿಸಲು ಖುಖುಖಿ ಅಧ್ಯಯನ ತಂಡಕ್ಕೆ ಇದೇ ಸಂದರ್ಭದಲ್ಲಿ ಸೂಚಿಸಲಾಯಿತು.

ಸಂಸ್ಕರಿಸಿದ ನೀರಿನ ಬಗ್ಗೆ ನಡೆಯುತ್ತಿರುವ ಅಪಪ್ರಚಾರವನ್ನು ತಡೆಯಲು ಹಾಗೂ ಕೊಳಚೆ ನೀರು ಕೆರೆಗಳಿಗೆ ಸೇರುವುದನ್ನು ತಪ್ಪಿಸಲು ಸರ್ಕಾರದ ಮಟ್ಟದಲ್ಲಿ ಕಠಿಣ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸಭೆಗೆ ಭರವಸೆ ನೀಡಲಾಯಿತು. ಸಭೆಯಲ್ಲಿ, ಖುಖುಖಿ ಅಸೋಸಿಯೇಟ್ ಪ್ರೊಫೆಸರ್, ಲಕ್ಷ್ಮಿ ನಾರಾಯಣ ರಾವ್, ವ್ಯಾಲಿ ಯೋಜನೆಗಳ ಅಧ್ಯಯನ ತಂಡದ ಖುಖುಖಿ ಸಂಸ್ಥೆಯ ಇತರೆ ಪ್ರಾಧ್ಯಾಪಕರು, ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಶ್ರೀ ಡಾ. ರಾಮ್ ಪ್ರಸಾತ್ ಮನೋಹರ್, ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ತಾಲೂಕು ಆಡಳಿತದ ವತಿಯಿಂದ ದೇವರ ದಾಸಿಮಯ್ಯ ಜಯಂತೋತ್ಸವ.

ನೈಜ್ಯ ದೆಸೆ ನ್ಯೂಸ್




**ತುರುವೇಕೆರೆ: ತಾಲೂಕು ಕಚೇರಿ ಆವರಣದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ತಾಲೂಕು ನೇಕಾರರ ಒಕ್ಕೂಟ ಇವರ ಸಂಯುಕ್ತಯಾಶ್ರಯದಲ್ಲಿ ದೇವರ ದಾಸಿಮಯ್ಯ ಜಯಂತೋತ್ಸವ ಸಮಾರಂಭವನ್ನು ಆಯೋಜಿಸಲಾಗಿತ್ತು. ಇದೆ ವೇಳೆ ತಾಲೂಕು ದಂಡಾಧಿಕಾರಿ ಕುಂ, ಇ, ಅಹಮದ್ ಮಾತನಾಡಿ,**

ದೇವರ ದಾಸಿಮಯ್ಯ ರವರು ಸರಿಸುಮಾರು ಹತ್ತನೇ ಶತಮಾನದವರು ಸುರಪುರ ಜಿಲ್ಲೆಯ ಮುದನೂರು ಎಂಬ ಹಳ್ಳಿಯಲ್ಲಿ ಜನಿಸಿದವರಾಗಿದ್ದು, ಭೌತಿಕವಾಗಿ ಮಾತ್ರವಲ್ಲದೇ ಆಧ್ಯಾತ್ಮಕವಾಗಿಯೂ ಅತ್ಯಂತ ಸಮೃದ್ಧವಾದ ದೇಶ ನಮ್ಮ ಭಾರತ ಆದಿಕಾಲದಿಂದಲೂ ಅನೇಕ ಋಷಿಮುನಿಗಳು ತಮ್ಮ ಅಮೋಘ ತಪಸ್ಸಿನಿಂದ ಸಿದ್ಧಿಯನ್ನು ಪಡೆದು ಆಧ್ಯಾತ್ಮಿಕತೆಯ ಮಹತ್ವವನ್ನು ಇಡೀ ವಿಶ್ವಕ್ಕೆ ಸಾರಿದ ಪುಣ್ಯ ಭೂಮಿ ಇದಾಗಿದ್ದು, ಅಂತಹ ಸಾಧುಗಳಲೊಬ್ಬರು ಶ್ರೀ ದೇವರ ದಾಸಿಮಯ್ಯನವರೂ ಇವರು ಕೇವಲ ಒಬ್ಬ ಮುನಿ ಮಾತ್ರವಲ್ಲದೆ ಹತ್ತು ಹನ್ನೊಂದನೇ ಶತಮಾನದಲ್ಲಿದ್ದ ಮೊಟ್ಟ ಮೊದಲ ವಚನಕಾರರು ಕೂಡ ಎಂದರು.

ಇದೇ ವೇಳೆ ಬಾಲಕಿ ಹರ್ಷಿಕಾ ದೇವಾಂಗನೇ ಮಾತನಾಡಿ, ದೇವರ ದಾಸಿಮಯ್ಯನ ಜೀವನ ಚರಿತ್ರೆಯನ್ನು ಬಹಳ ಸ್ಪಷ್ಟವಾಗಿ ವಿವರವಾಗಿ ದೇವರ ದಾಸಿಮಯ್ಯ ಹುಟ್ಟಿನಿಂದ ಕೊನೆಯವರಿಗೂ ನಡೆದು ಬಂದ ಹಾದಿಯನ್ನು ನೆನಪಿಸುತ್ತ ಅದ್ಭುತವಾಗಿ ಪರಿಚಯಿಸಿದರು, ಇದೇ ಸಂದರ್ಭದಲ್ಲಿ ಉಪನ್ಯಾಸಕರು ಪ್ರಗತಿಪರ ಸಂಘಟನೆಯ ಮುಖಂಡರುಗಳು, ತಾಲೂಕು ಆಡಳಿತದ ಸಿಬ್ಬಂದಿಗಳು ಹಿರಿಯರು ಮಹಿಳೆಯರು ನೇಕಾರ ಒಕ್ಕೂಟದ ಪದಾಧಿಕಾರಿಗಳು ಹಲವರು ಉಪಸ್ಥಿತರಿದ್ದರು.

# ಜಿಲ್ಲಾಡಳಿತ ಭವನದಲ್ಲಿ ದೇವರ ದಾಸಿಮಯ್ಯ ಜಯಂತಿ ಆಚರಣೆ.




ನೈಜ್ಯ ದೆಸೆ ನ್ಯೂಸ್

**ಬೆಂಗ್ರಾಮಾಂತರ: ವಚನಕಾರ 'ದೇವರ ದಾಸಿಮಯ್ಯ ಅವರ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ ಅವರು ದೇವರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು.**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ಜಯಂತಿ ಹಮ್ಮಿಕೊಳ್ಳಲಾಗಿತ್ತು. ವೃತ್ತಿಯಲ್ಲಿ ನೇಯ್ಗೆಕಾರರಾದ ದಾಸಿಮಯ್ಯನವರು ಶಿವನಿಗೆ ಬಟ್ಟೆಯನ್ನು ಕೊಟ್ಟು ಅಪೂರ್ವಭಕ್ತಿ ಮೆರೆದಂತೆ ಐತಿಹ್ಯ ಪುರಾಣಗಳಲ್ಲಿ ಉಲ್ಲೇಖಗಳು ಸಿಗುತ್ತವೆ. ಶಿವನ ಅಪಾರ ಭಕ್ತರಾಗಿದ್ದು, ರಾಮನಾಥ ಇವರ ಅಂಕಿತನಾಮ. ಶಿವ ಜಗತ್ತನ್ನೇ ವ್ಯಾಪಿಸಿಕೊಂಡಂತೆ, ಜಗತ್ತೇ ಶಿವನ ರೂಪ ಎಂಬ ನಿಲುವಿನೊಂದಿಗೆ,

"ಇಳೆ ನಿಮ್ಮ ದಾನ, ಬೆಳೆ ನಿಮ್ಮ ದಾನ, ಸುಳಿದು ಸೂಸುವ ಗಾಳಿ ನಿಮ್ಮ ದಾನವಯ್ಯ ಎಂದೆನ್ನುವ ದಾಸಿಮಯ್ಯನಲ್ಲಿ ಈ ಲೋಕವನ್ನು ನೋಡುವ ಕ್ರಮ ಹೊಸತನದಿಂದ ಕೂಡಿದೆ. ಅವರ ವಚನಗಳು ಇಂದಿಗೂ ಪ್ರಸ್ತುತವಾಗಿವೆ. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರಮೇಶ್, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಶ್ರೀಕಾಂತ್, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಮೋಹನ್, ಮುಜರಾಯಿ ತಹಶೀಲ್ದಾರ್ ಹೇಮಾವತಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಈ ಸಂಧರ್ಭದಲ್ಲಿ ಉಪಸ್ಥಿತರಿದ್ದರು.

# ಬೇಡಿಕೆ ಈಡೇರದಿದ್ದರೆ ರಸ್ತೆ ತಡೆ ಎಚ್ಚರಿಕೆ ಅಧಿಕಾರಿಗಳ ಭರವಸೆಯ ಬಳಿಕ ಪ್ರತಿಭಟನೆ ತಾತ್ಕಾಲಿಕ ಅಂತ್ಯ

ನೈಜ್ಯ ದೆಸೆ ನ್ಯೂಸ್




**ದೇವದುರ್ಗ: ತಾಲೂಕಿನ ಜಾಲಹಳ್ಳಿ ಜಾಲಹಳ್ಳಿ ಸಮೀಪದ ನಾರಾಯಣಪುರ ಬಲದಂಡೆ ಕಾಲುವೆ ಅವಲಂಬಿತ ಪ್ರದೇಶದ ರೈತರು ಭತ್ತ, ಸಜ್ಜೆ, ಸೂರ್ಯಕಾಂತಿ, ಮೆಣಸಿನಕಾಯಿ ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆದಿದ್ದು, ಬೆಳೆಗಳು ಸಂಪೂರ್ಣವಾಗಿ ಕೈಗೆ ಸಿಗಲು ಏಪ್ರಿಲ್ 15ರವರೆಗೆ ಕಾಲುವೆಗೆ ನಿರಂತರವಾಗಿ ನೀರು ಹರಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘ ಹಾಗೂ ನೀರು ಬಳಕೆದಾರರ ಸಂಘದ ವತಿಯಿಂದ ಸೋಮವಾರ ಅಂಬೇಡ್ಕರ್ ಸರ್ಕಲ್ ಬಳಿ ಧರಣಿ ಸತ್ಯಾಗ್ರಹ ನಡೆಸಲಾಯಿತು.**

ಈ ಸಂದರ್ಭದಲ್ಲಿ ರಂಗಣ್ಣ ಕೊಲ್ಕರ್ ಮಾತನಾಡಿ, ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ತಕ್ಷಣ ಎಚ್ಚೆತ್ತು ರೈತರ ಬೆಳೆಗಳಿಗೆ ಅನುಕೂಲವಾಗುವಂತೆ ಏಪ್ರಿಲ್ 15ರವರೆಗೆ ನೀರು ಹರಿಸಬೇಕೆಂದು ಒತ್ತಾಯಿಸಿದರು. ಇದೇ ವೇಳೆ ಪತ್ರಕರ್ತ ಗಿರಿಯಪ್ಪ ಪೂಜಾರಿ ಮಾತನಾಡಿ, ಪ್ರಸ್ತುತ ನೀರಾವರಿ ಇಲಾಖೆ 10 ದಿನಗಳ ವಾರಬಂದಿ ಕ್ರಮದಲ್ಲಿ ನೀರು ಹರಿಸುತ್ತಿರುವುದರಿಂದ ಕಾಲುವೆಯ ಕೊನೆಯ ಭಾಗದ ರೈತರಿಗೆ ಸಮರ್ಪಕವಾಗಿ ನೀರು ತಲುಪುತ್ತಿಲ್ಲ. ರೈತರ ಅಭಿಪ್ರಾಯ ಪಡೆಯದೇ ಅವೈಜ್ಞಾನಿಕವಾಗಿ ಏಪ್ರಿಲ್ 3ರಂದು ನೀರು ಬಂದ್ ಮಾಡಲು ಮುಂದಾಗಿರುವುದು ಸರಿಯಲ್ಲ ಎಂದು ಆರೋಪಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರಸಣ್ಣ ನಾಯಕ್ ಮಾತನಾಡಿ, ಏಪ್ರಿಲ್ 3ರಂದು ನೀರು ಬಂದ್ ಮಾಡಿದಲ್ಲಿ ಕಾಳುಕಟ್ಟಿರುವ ಭತ್ತ, ಸೂರ್ಯಕಾಂತಿ, ಸಜ್ಜೆ ಹಾಗೂ ಮೆಣಸಿನಕಾಯಿ ಬೆಳೆಗಳಿಗೆ ಭಾರೀ ಹಾನಿಯಾಗಲಿದೆ. ಈ ಭಾಗದಲ್ಲಿ ಶೇಕಡಾ 80ರಷ್ಟು ಬೆಳೆಗಳು ಹಾನಿಗೊಳಗಾಗಿ ಕೋಟ್ಯಾಂತರ ರೂಪಾಯಿ ನಷ್ಟ ಉಂಟಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು. ಇದಲ್ಲದೆ, ಈಗಾಗಲೇ ಅತಿವೃಷ್ಟಿಯಿಂದ ಸಂಕಷ್ಟದಲ್ಲಿರುವ ರೈತರಿಗೆ ಇದು ಮತ್ತಷ್ಟು ಹೊರೆ ಆಗಲಿದೆ. ಇಂತಹ ಸಂದರ್ಭದಲ್ಲಿ ನೀರು ಬಂದ್ ಮಾಡುವುದು ಗಾಯದ ಮೇಲೆ ಬರೆ ಎಳೆದಂತಾಗುತ್ತದೆ ಎಂದು ಅವರು ಹೇಳಿದರು.

ಅಧಿಕಾರಿಗಳು ತಕ್ಷಣ ನೀರಾವರಿ ಸಲಹಾ ಸಮಿತಿ ಸಭೆ ಕರೆದು ಏಪ್ರಿಲ್ 15ರವರೆಗೆ ಕಾಲುವೆಗೆ ನೀರು ಹರಿಸುವಂತೆ ನಿರ್ಧಾರ



ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಪ್ರತಿಭಟನಾ ಸ್ಥಳಕ್ಕೆ ಸೂಪರಿಂಟೆಂಡೆಂಟ್ ಇಂಜಿನಿಯರ್ ರಮೇಶ್ ರಾಠೋಡ, ಇಇ ಸುರೇಂದ್ರ ರೆಡ್ಡಿ, ಎಇಇ ಮಹಾಲಿಂಗಪ್ಪ ಭಜಂತ್ರಿ, ಜೆಇ ಶ್ರೀಧರ್ ಬಲ್ಲಿದಾವ್ ಭೇಟಿ ನೀಡಿ ಪ್ರತಿಭಟನಾಕಾರರೊಂದಿಗೆ ಮಾತುಕತೆ ನಡೆಸಿದರು. ರೈತರ ಸಮಸ್ಯೆಯನ್ನು ಮೇಲಾಧಿಕಾರಿಗಳು ಹಾಗೂ ಸಚಿವರ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

ನಾರಾಯಣಪುರ ಜಲಾಶಯದಲ್ಲಿ 14 ಟಿಎಂಸಿ ಹಾಗೂ ಆಲಮಟ್ಟಿ ಜಲಾಶಯದಲ್ಲಿ 10 ಟಿಎಂಸಿ ನೀರು ಇರುವುದಾಗಿ ತಿಳಿಸಿ, ಈ ಕುರಿತು ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಲಿಖಿತ ಭರವಸೆ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಪ್ರತಿಭಟನಾಕಾರರು, ಅಧಿಕಾರಿಗಳ ಭರವಸೆಯನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋರಾಟವನ್ನು ತಾತ್ಕಾಲಿಕವಾಗಿ ಹಿಂಪಡೆಯಲಾಗಿದೆ. ಆದರೆ ರೈತರ ಬೆಳೆಗಳಿಗೆ ಅನುಕೂಲವಾಗುವಂತೆ ನೀರು ಹರಿಸದಿದ್ದರೆ ರಾಜ್ಯ ಹೆದ್ದಾರಿ ತಡೆದು ಬೃಹತ್ ಪ್ರತಿಭಟನೆ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದವರು ಪ್ರಾಂತ ರೈತ ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ನರಸಣ್ಣ ನಾಯಕ, ತಾಲೂಕು ಅಧ್ಯಕ್ಷ ಹನುಮಂತ ಗುರಿಕಾರ, ಕಾರ್ಯದರ್ಶಿ ಮೌನೇಶ ಜಾಲಹಳ್ಳಿ, ನೀರು ಬಳಕೆದಾರರ ಸಂಘದ ಅಧ್ಯಕ್ಷ ಶಿವರಾಜ ಯರಕಮಟ್ಟಿ, ಕಾರ್ಯದರ್ಶಿ ಭೀಮಣ್ಣ ಡೆಂಗಿ, ಶಬ್ಬೀರ್, ಗಿರಿಯಪ್ಪ ಪೂಜಾರಿ, ರಂಗಣ್ಣ ಕೋಲ್ಕಾರ, ಸಾಬಣ್ಣ ಕಮ್ಮಲದಿನ್ನಿ, ಭೂತಪ್ಪ ದೇವರಮನಿ, ಲಕ್ಕಪ್ಪಗೌಡ ಚಿಂಚೋಡಿ, ಸಿದ್ದಪ್ಪ ಗುಮೇದಾರ, ಶರಣಗೌಡ ಚಿಂಚೋಡಿ, ಚೀದಾನಂದ, ಹನುಮಂತ ಮಡಿವಾಳ,

ರಂಗನಾಥ ಬುಂಕಲದೊಡ್ಡಿ, ದುರುಗಪ್ಪ ಹೊರಟ್ಟಿ, ಮಕ್ತುಮ್ ಭಾಷಾ, ರಂಗನಾಥ ಮುರಾಳ, ಮಹಾಲಿಂಗ ದೊಡ್ಡಮನಿ, ಶ್ರೀನಿವಾಸ ತಿಂಪೂರು, ಯಂಕಪ್ಪ ಲಿಂಗದಳ್ಳಿ, ಟಿ. ಆದಿನಾರಾಯಣ, ರಾಜರೆಡ್ಡಿ, ಹನುಮಂತ ಮಂಡಲಗುಡ್ಡ, ಹನುಮಂತ ಗಾಜಲದಿನ್ನಿ, ಅಂಜು ರಾಂಪಳ್ಳಿ, ರಮೇಶ್ ಗಾಂಜಿ, ರವಿ ಚಿಂಚರಕಿ ಸೇರಿದಂತೆ ಅನೇಕ ರೈತರು ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದರು.